Volume : 9 | Issue : 203 | November : 01 : 2026 : Sunday
ಸಂಪುಟ : 9 | ಸಂಚಿಕೆ : 203 | ನವಂಬರ್ : 01 : 2026 : ಭಾನುವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ಪುಟ 4 ₹2 ‖ ಕನ್ನಡ ದಿನಪತ್ರಿಕೆ ‖

VIKRAMA VAHINI
PRGI NO: KARKAN/2018/78481

ಹತ್ತು ವರ್ಷಗಳ ಬಳಿಕ ಮತ್ತೆ ಒಂದೇ ಚಿತ್ರದಲ್ಲಿ ನಟಿಸಲಿರುವ ಸಿಂಭು ಮತ್ತು ನಯನತಾರಾ. ಹೊಸ ಆಕ್ಷನ್ ಕಾಮಿಡಿ ಚಿತ್ರದಲ್ಲಿ ಸಿಂಭು ಪೊಲೀಸ್ ಅಧಿಕಾರಿಯಾಗಿ ಕಾಣಿಸಿಕೊಳ್ಳಲಿದ್ದಾರೆ.

ಗೋವುಗಳ ರಕ್ಷಣೆಗಾಗಿ ಹಾಲಿನ ದರ ಏರಿಕೆ ಅನಿವಾರ್ಯ: ಸಿಎಂ ಪುಟ 2

ಸ್ಟಿಂಗ್ ಪ್ರಕರಣ ಮುಚ್ಚಿಹಾಕಲಾಗಿದೆ: ಆರ್. ಅಶೋಕ್ ಆರೋಪ ಪುಟ 3

ಹೈನುಗಾರನಿಗೆ ಸಿಹಿ, ಗ್ರಾಹಕನಿಗೆ ಬಿಸಿ!

■ ಇದಿಂದಲೇ ಹೊಸ ದರ ಜಾರಿ: ಪ್ರತಿ ಲೀಟರ್ ಹಾಲಿಗೂ ರೂ 8 ಹೆಚ್ಚಳ ■

ಹಾಲಿನ ದರ ಲೀಟರ್‌ಗೆ 8 ರೂ. ಹೆಚ್ಚಳದಿಂದ ಹೈನುಗಾರರಿಗೆ ಕೊಂಚ ನೆಮ್ಮದಿ ಸಿಕ್ಕಿದ್ದರೆ, ಗ್ರಾಹಕರಿಗೆ ಬೆಲೆ ಏರಿಕೆಯ ಬಿಸಿ ತಟ್ಟಿದೆ. ಮೊಸರು, ಹೋಟೆಲ್ ತಿಂಡಿ–ತಿನಿಸುಗಳ ದರವೂ ಹೆಚ್ಚುವ ಆತಂಕದ ನಡುವೆ, ದರ ಏರಿಕೆ ಹಿಂಪಡೆಯುವಂತೆ ಹೋಟೆಲ್ ಮಾಲೀಕರ ಸಂಘ ಒತ್ತಾಯಿಸಿದೆ.

● ವಿಕ್ರಮ ವಾಹಿನಿ । ಬೆಂಗಳೂರು/ಶಿವಮೊಗ್ಗ/ಮೈಸೂರು

ಕನ್ನಡ ರಾಜ್ಯೋತ್ಸವದ ಹೊಸ್ತಿಲಲ್ಲಿ ರಾಜ್ಯ ಸರ್ಕಾರ ನಂದಿನಿ ಹಾಲಿನ ದರವನ್ನು ಲೀಟರ್‌ಗೆ 8 ರೂ. ಹೆಚ್ಚಿಸಿದ್ದು, ನವೆಂಬರ್ 1ರಿಂದ ಪರಿಷ್ಕೃತ ದರ ಜಾರಿಗೆ ಬಂದಿದೆ. ಹೆಚ್ಚುವರಿ 8 ರೂ.ನಲ್ಲಿ 7 ರೂ. ಹಾಲು ಉತ್ಪಾದಕರಿಗೆ ಹಾಗೂ 1 ರೂ. ಹಾಲು ಒಕ್ಕೂಟಗಳಿಗೆ ನೀಡಲು ನಿರ್ಧರಿಸಲಾಗಿದೆ.

ಸರ್ಕಾರದ ಈ ನಿರ್ಧಾರ ಹೈನುಗಾರರಲ್ಲಿ ಸಂತಸ ಮೂಡಿಸಿದ್ದರೆ, ಗ್ರಾಹಕರು ಮತ್ತು ಹೋಟೆಲ್ ಮಾಲೀಕರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ.

ಹಾಲಿನ ದರ ಏರಿಕೆಯಿಂದ ಮೊಸರು ಸೇರಿದಂತೆ ಹಾಲಿನ ಉತ್ಪನ್ನಗಳ ಬೆಲೆಯೂ ಹೆಚ್ಚಳವಾಗಿದ್ದು, ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಕಂಗೆಟ್ಟಿರುವ ಜನಸಾಮಾನ್ಯರಿಗೆ ಮತ್ತಷ್ಟು ಹೊರೆ ಎದುರಾಗಿದೆ. ಹಾಲಿನ ದರ ಹೆಚ್ಚಳದಿಂದ ಹೋಟೆಲ್‌ಗಳಲ್ಲಿ ಟೀ, ಕಾಫಿ ಹಾಗೂ ಸಿಹಿ ತಿಂಡಿಗಳ ಬೆಲೆಯೂ ಏರಿಕೆಯಾಗುವ ಆತಂಕ ವ್ಯಕ್ತವಾಗಿದೆ.

ಹೋಟೆಲ್ ಉದ್ಯಮಕ್ಕೆ ಬೆಲೆ ಏರಿಕೆ ಬಿಸಿ: ಹಾಲಿನ ದರ ಹೆಚ್ಚಳ ಹೋಟೆಲ್ ಉದ್ಯಮಕ್ಕೂ ಹೊಡೆತ ನೀಡಲಿದೆ. ಈಗಾಗಲೇ ಅಡುಗೆ ಅನಿಲ, ಸಕ್ಕರೆ, ಅಕ್ಕಿ, ತರಕಾರಿ, ವಿದ್ಯುತ್, ನೀರು ಹಾಗೂ ಕಾರ್ಮಿಕರ ವೇತನ ಹೆಚ್ಚಳದಿಂದ ಉದ್ಯಮ ಸಂಕಷ್ಟದಲ್ಲಿದೆ. ಕಳೆದ ಮೂರು ವರ್ಷಗಳಲ್ಲಿ ಹಾಲಿನ ದರ ಸುಮಾರು 17 ರೂ. ಹೆಚ್ಚಳವಾಗಿದ್ದು, ಇದೀಗ ಮತ್ತೆ 8 ರೂ. ಏರಿಸಿರುವುದು ಗಾಯದ ಮೇಲೆ ಬರೆ ಎಳೆದಂತಾಗಿದೆ ಎಂದು ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ. ನಾರಾಯಣಗೌಡ ತಿಳಿಸಿದ್ದಾರೆ.

ದರ ಏರಿಕೆಯನ್ನು ತಕ್ಷಣ ಹಿಂಪಡೆಯಬೇಕು. ರೈತರಿಗೆ ನೆರವು ನೀಡುವುದು ಸರ್ಕಾರದ ಕರ್ತವ್ಯವಾದರೂ ಅದಕ್ಕಾಗಿ ಗ್ರಾಹಕರು ಮತ್ತು ಹೋಟೆಲ್ ಉದ್ಯಮದ ಮೇಲೆ ಹೊರೆ ಹಾಕಬಾರದು. ಸರ್ಕಾರ ನೇರವಾಗಿ ಸಬ್ಸಿಡಿ ಅಥವಾ ಆರ್ಥಿಕ ನೆರವು ನೀಡಬೇಕು ಎಂದು ಅವರು ಆಗ್ರಹಿಸಿದ್ದಾರೆ.

ಹೋಟೆಲ್ ಮಾಲೀಕ ಗಣೇಶ್ ಮಾತನಾಡಿ, ಹಾಲಿನ ದರ ಏರಿಕೆಯಿಂದ ಅರ್ಧ ಟೀ ಮತ್ತು ಕಾಫಿ ದರವನ್ನು 2 ರೂ. ಹೆಚ್ಚಿಸುವ ಅನಿವಾರ್ಯತೆ ಎದುರಾಗಿದೆ. ಗ್ರಾಹಕರಿಗೆ ಹೆಚ್ಚಿನ ಹೊರೆ ಆಗದಂತೆ ದರ ನಿಗದಿಪಡಿಸಲು ಪ್ರಯತ್ನಿಸುತ್ತಿದ್ದೇವೆ ಎಂದರು.

ಹೈನುಗಾರರಿಗೆ ಕೊಂಚ ಸಮಾಧಾನ

ಹಾಲಿನ ಖರೀದಿ ದರ ಹೆಚ್ಚಳದಿಂದ ಹೈನುಗಾರರಿಗೆ ಸ್ವಲ್ಪ ಅನುಕೂಲವಾಗಲಿದೆ ಎಂಬ ಸಂತಸವಿದೆ. ಮೇವಿನ ಕೊರತೆ, ಪಶು ಆಹಾರದ ಬೆಲೆ ಏರಿಕೆ ಹಾಗೂ ಜಾನುವಾರುಗಳ ನಿರ್ವಹಣಾ ವೆಚ್ಚದಿಂದ ಹೈನುಗಾರಿಕೆ ಕಷ್ಟವಾಗಿದೆ. ಪ್ರತಿ ತಿಂಗಳು ಸಿಗುವ ಹೆಚ್ಚುವರಿ ಹಣ ಮೇವಿನ ವೆಚ್ಚಕ್ಕೆ ನೆರವಾಗಲಿದೆ ಎಂದು ರೈತರು ಅಭಿಪ್ರಾಯಪಟ್ಟಿದ್ದಾರೆ. ಆದರೆ ಹಿಂಡಿ, ಬೂಸ ಹಾಗೂ ಒಣಹುಲ್ಲಿನ ಬೆಲೆಯೂ ಹೆಚ್ಚಿರುವುದರಿಂದ ಹಾಲಿನ ದರ ಇನ್ನಷ್ಟು ಹೆಚ್ಚಿಸಬೇಕಿತ್ತು ಎಂಬುದು ಕೆಲ ರೈತರ ಅಭಿಪ್ರಾಯ.

ಮಲ್ಲಿಗೆನಹಳ್ಳಿಯ ರೈತ ಚಿಕ್ಕಣ್ಣ ಮಾತನಾಡಿ, ಮಳೆ ಕೊರತೆಯಿಂದ ಹಸಿ ಹುಲ್ಲು ಸಿಗುತ್ತಿಲ್ಲ. ಒಂದು ಪೆಂಡಿ ಒಣಹುಲ್ಲಿಗೆ 300 ರೂ. ಕೇಳುತ್ತಿದ್ದಾರೆ. ಹಿಂಡಿ ಮತ್ತು ಬೂಸದ ಬೆಲೆಯೂ ಹೆಚ್ಚಿದೆ. ಹಾಲಿನ ದರ ಏರಿಕೆಯಿಂದ ಸ್ವಲ್ಪ ನೆಮ್ಮದಿ ಸಿಕ್ಕಂತಾಗಿದೆ ಎಂದರು. ಮತ್ತೊಬ್ಬ ರೈತ ಹನುಮಂತ ನಾಯ್ಕ ಕೂಡ ಹೈನುಗಾರಿಕೆ ನಷ್ಟದಲ್ಲಿ ನಡೆಯುತ್ತಿತ್ತು. ಈಗಿನ ದರ ಏರಿಕೆ ಸ್ವಲ್ಪ ಮಟ್ಟಿಗೆ ನೆರವಾಗಲಿದೆ ಎಂದು ತಿಳಿಸಿದರು. ಹಾಲು ಒಕ್ಕೂಟದ ಗೌರವಾಧ್ಯಕ್ಷ ಗೊಂದಿ ಜಯರಾಮ್ ಮಾತನಾಡಿ, ಹಾಲಿನ ಖರೀದಿ ದರವನ್ನು 20 ರೂ. ಹೆಚ್ಚಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು. ಜಾನುವಾರುಗಳ ಮೇವು ಮತ್ತು ನಿರ್ವಹಣಾ ವೆಚ್ಚ ಹೆಚ್ಚಾಗಿರುವುದರಿಂದ ಹೈನುಗಾರಿಕೆ ನಡೆಸುವುದೇ ಕಷ್ಟವಾಗಿದೆ. ಈಗ 7 ರೂ. ಹೆಚ್ಚಿಸಿರುವುದು ಸ್ವಲ್ಪ ಸಮಾಧಾನ ತಂದಿದೆ ಎಂದರು.

ಗ್ರಾಹಕರ ಜೇಬಿಗೆ ಕತ್ತರಿ

ಹಾಲಿನ ದರ ಏರಿಕೆಯಿಂದ ಸಾಮಾನ್ಯ ಕುಟುಂಬಗಳ ಮಾಸಿಕ ಖರ್ಚು ಹೆಚ್ಚಲಿದೆ ಎಂದು ಗ್ರಾಹಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಾಲಿನ ಜೊತೆಗೆ ಮೊಸರು, ಸಿಹಿ ಪದಾರ್ಥಗಳು ಹಾಗೂ ಹೋಟೆಲ್ ತಿಂಡಿ–ತಿನಿಸುಗಳ ಬೆಲೆಯೂ ಹೆಚ್ಚಾಗುವ ಸಾಧ್ಯತೆಯಿದೆ. ರೈತರ ಹೆಸರಿನಲ್ಲಿ ಗ್ರಾಹಕರ ಮೇಲೆ ಹೊರೆ ಹಾಕುವ ಬದಲು ಸರ್ಕಾರವೇ ಸಹಾಯಧನ ನೀಡಬೇಕಿತ್ತು ಎಂಬುದು ಗ್ರಾಹಕರ ವಾದ.

ಗ್ರಾಹಕ ನರಸಿಂಹ ಮಾತನಾಡಿ, ಹಾಲಿನ ದರದ ಜೊತೆಗೆ ಮೊಸರಿನ ದರವನ್ನೂ ಹೆಚ್ಚಿಸಲಾಗಿದೆ. ಟೀ, ಕಾಫಿ ಹಾಗೂ ಸಿಹಿ ಪದಾರ್ಥಗಳ ಬೆಲೆಯೂ ಏರಿಕೆಯಾಗಲಿದೆ. ಇದರಿಂದ ಸಾಮಾನ್ಯ ಜನರ ಬದುಕು ಮತ್ತಷ್ಟು ದುಬಾರಿಯಾಗಲಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರೈತರ ಹಿತವೇ ದರ ಏರಿಕೆಯ ಉದ್ದೇಶ: ಕೆಎಂಎಫ್

ಈ ವರ್ಷ ಮಳೆ ಕೊರತೆಯಿಂದ ನೀರು ಮತ್ತು ಮೇವಿನ ಅಭಾವ ಉಂಟಾಗಿ ಹೈನುಗಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಪಶುಗಳ ನಿರ್ವಹಣೆ, ಔಷಧೋಪಚಾರ ಹಾಗೂ ಮೇವು ಪೂರೈಕೆಯ ವೆಚ್ಚ ಹೆಚ್ಚಾಗಿದೆ.

ಹೀಗಾಗಿ ಹಾಲಿನ ಖರೀದಿ ದರವನ್ನು ಲೀಟರ್‌ಗೆ ಕನಿಷ್ಠ 10ರಿಂದ 12 ರೂ. ಹೆಚ್ಚಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು ಎಂದು ಕೆಎಂಎಫ್ ತಿಳಿಸಿದೆ.

ಹೈನುಗಾರಿಕೆ ಕ್ಷೇತ್ರವನ್ನು ಸುಸ್ಥಿರವಾಗಿ ಬೆಳೆಸುವ ಹಾಗೂ ಹಾಲು ಉತ್ಪಾದಕರಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ದರ ಪರಿಷ್ಕರಿಸಲಾಗಿದೆ.

ಹೆಚ್ಚಳದ ಮೊತ್ತದಲ್ಲಿ 7 ರೂ. ನೇರವಾಗಿ ಹಾಲು ಉತ್ಪಾದಕರಿಗೆ ವರ್ಗಾಯಿಸಲು ಸೂಚಿಸಲಾಗಿದೆ ಎಂದು ಕೆಎಂಎಫ್ ಪ್ರಕಟಣೆ ತಿಳಿಸಿದೆ.

■ ಸುದ್ದಿ ಚುಟುಕು

ಜ್ಞಾನಭಾರತಿ ಬಳಿ ಸ್ಫೋಟಕ ವಸ್ತು ಪತ್ತೆ: ಪೊಲೀಸರಿಂದ ಪರಿಶೀಲನೆ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಪುಲಿಕೇಶಿನಗರದಲ್ಲಿ ಐಇಡಿ ಸ್ಫೋಟ ಸಂಭವಿಸಿ ಇಬ್ಬರು ಕಾರ್ಮಿಕರು ಗಾಯಗೊಂಡ ಘಟನೆ ಮಾಸುವ ಮುನ್ನವೇ, ಜ್ಞಾನಭಾರತಿ ಸಮೀಪ ಸ್ಫೋಟಕ ಮಾದರಿಯ ಅನುಮಾನಾಸ್ಪದ ವಸ್ತು ಪತ್ತೆಯಾಗಿರುವುದು ಆತಂಕಕ್ಕೆ ಕಾರಣವಾಗಿದೆ.

ಸೊಣ್ಣೇನಹಳ್ಳಿ ಸರ್ಕಲ್ ಬಳಿ ಬಂಡೆಗಳನ್ನು ಸ್ಫೋಟಿಸಲು ಕ್ವಾರಿಗಳಲ್ಲಿ ಬಳಸುವ ಡೈನಮೈಟ್ ಮಾದರಿಯ ವಸ್ತು ಪತ್ತೆಯಾಗಿದೆ. ವಿಷಯ ತಿಳಿಯುತ್ತಿದ್ದಂತೆಯೇ ಜ್ಞಾನಭಾರತಿ ಠಾಣೆ ಪೊಲೀಸರು ಬಾಂಬ್ ನಿಷ್ಕ್ರಿಯ ದಳದೊಂದಿಗೆ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಪತ್ತೆಯಾಗಿರುವ ವಸ್ತು ಕ್ವಾರಿಗಳಲ್ಲಿ ಬಳಸುವ ಸ್ಫೋಟಕವಾಗಿರಬಹುದು ಎಂದು ಶಂಕಿಸಲಾಗಿದೆ. ಇದನ್ನು ಅಲ್ಲಿಗೆ ತಂದಿಟ್ಟವರು ಯಾರು ಮತ್ತು ಯಾವ ಉದ್ದೇಶಕ್ಕಾಗಿ ಇಡಲಾಗಿದೆ ಎಂಬ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಇತ್ತೀಚೆಗೆ ಅಕ್ಟೋಬರ್ 20ರಂದು ಪುಲಿಕೇಶಿನಗರದ ನಿರ್ಮಾಣ ಹಂತದ ಕಟ್ಟಡವೊಂದರಲ್ಲಿ ಪಾರ್ಸೆಲ್ ರೂಪದಲ್ಲಿದ್ದ ಟಾರ್ಚ್ ಬ್ಯಾಟರಿಯನ್ನು ಆನ್ ಮಾಡಲು ಯತ್ನಿಸಿದಾಗ ಸ್ಫೋಟ ಸಂಭವಿಸಿತ್ತು. ಘಟನೆಯಲ್ಲಿ ಸೆಕ್ಯುರಿಟಿ ಗಾರ್ಡ್ ಅಲ್ಲಾವುದ್ದೀನ್ ಹಾಗೂ ಉತ್ತರ ಪ್ರದೇಶ ಮೂಲದ ಪೇಂಟರ್ ಸೂರಜ್ ಕುಮಾರ್ ಗಂಭೀರವಾಗಿ ಗಾಯಗೊಂಡಿದ್ದರು. ಈ ಘಟನೆ ಬೆನ್ನಲ್ಲೇ ಮತ್ತೊಂದು ಅನುಮಾನಾಸ್ಪದ ಸ್ಫೋಟಕ ವಸ್ತು ಪತ್ತೆಯಾಗಿರುವುದು ಪೊಲೀಸರ ಗಮನ ಸೆಳೆದಿದೆ. ಸ್ಫೋಟಕ ವಸ್ತು ಪತ್ತೆಯಾದ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಮುನ್ನೆಚ್ಚರಿಕೆ ಕ್ರಮವಾಗಿ ಪೊಲೀಸರು ಸುತ್ತಮುತ್ತಲಿನ ಪ್ರದೇಶದಲ್ಲಿ ಪರಿಶೀಲನೆ ನಡೆಸಿ, ಸಾರ್ವಜನಿಕರು ಅನುಮಾನಾಸ್ಪದ ವಸ್ತುಗಳ ಸಮೀಪ ತೆರಳದಂತೆ ಎಚ್ಚರಿಕೆ ನೀಡಿದ್ದಾರೆ.

ಪತ್ತೆಯಾದ ವಸ್ತುವಿನ ಮೂಲ, ಅದನ್ನು ಅಲ್ಲಿಗೆ ತಂದಿಟ್ಟವರ ವಿವರ ಹಾಗೂ ಇದರ ಹಿಂದೆ ಯಾವುದೇ ದುರುದ್ದೇಶವಿದೆಯೇ ಎಂಬುದನ್ನು ಪತ್ತೆಹಚ್ಚಲು ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುವ ಸಾಧ್ಯತೆಯಿದೆ. ತನಿಖೆಯ ಬಳಿಕವೇ ವಸ್ತುವಿನ ನಿಖರ ಸ್ವರೂಪ ತಿಳಿಯಲಿದೆ.

ರಾಮ್ ಗೋಪಾಲ್ ವರ್ಮಾಗೆ ರೂ 29.67 ಕೋಟಿ ಪಾವತಿಗೆ ನೋಟಿಸ್

● ವಿಕ್ರಮ ವಾಹಿನಿ । ಮುಂಬೈ

ಖ್ಯಾತ ನಿರ್ದೇಶಕ ರಾಮ್ ಗೋಪಾಲ್ ವರ್ಮಾ ಅವರಿಗೆ ರೂ 29.67 ಕೋಟಿ ಬಾಕಿ ಪಾವತಿಸುವಂತೆ ಎಕ್ಲಾಟಂಟ್ ಫಿಲ್ಮ್ಸ್ ಪ್ರೈವೇಟ್ ಲಿಮಿಟೆಡ್ ವಸೂಲಾತಿ ನೋಟಿಸ್ ಜಾರಿ ಮಾಡಿದೆ. ಅಲ್ಲದೆ, ಕಂಪನಿಯ ಲಿಖಿತ ಅನುಮತಿ ಪಡೆಯದೆ ವರ್ಮಾ ಅವರೊಂದಿಗೆ ವ್ಯವಹರಿಸದಂತೆ ನಿರ್ಮಾಪಕರು, ವಿತರಕರು, ಪ್ರಸಾರಕರು ಹಾಗೂ ಒಟಿಟಿ ವೇದಿಕೆಗಳಿಗೆ ಎಚ್ಚರಿಕೆ ನೀಡಿದೆ.

2010ರ ಏಪ್ರಿಲ್‌ನಲ್ಲಿ ವರ್ಮಾ ಮತ್ತು ಕಂಪನಿ ನಡುವೆ ನಡೆದ ಒಪ್ಪಂದವೇ ಈ ವಿವಾದಕ್ಕೆ ಕಾರಣವಾಗಿದೆ. ಬಾಕಿ ಮೊತ್ತದಲ್ಲಿ ಅಸಲು ಹಣದ ಜೊತೆಗೆ ಸುಮಾರು ರೂ 11.38 ಕೋಟಿ ಬಡ್ಡಿ ಸೇರಿದೆ. ಅಕ್ಟೋಬರ್ 15ರಂದು ಕಾನೂನು ನೋಟಿಸ್ ಕಳುಹಿಸಿರುವ ಕಂಪನಿ, ಅಕ್ಟೋಬರ್ 30ರೊಳಗೆ ಸಂಪೂರ್ಣ ಹಣ ಪಾವತಿಸುವಂತೆ ಗಡುವು ನೀಡಿತ್ತು. ಈ ಸಂಬಂಧ 2013ರಲ್ಲಿ ಬಾಂಬೆ ಹೈಕೋರ್ಟ್ ನೀಡಿದ್ದ ಆದೇಶವನ್ನೂ ಉಲ್ಲೇಖಿಸಿದೆ.

ಬಾಕಿ ಪಾವತಿಯಾಗುವವರೆಗೆ ಒಪ್ಪಂದದ ವ್ಯಾಪ್ತಿಗೆ ಬರುವ ಸಿನಿಮಾ ನಿರ್ಮಾಣ, ನಿರ್ದೇಶನ, ಸಹನಿರ್ಮಾಣ ಹಾಗೂ ಬರವಣಿಗೆ ಚಟುವಟಿಕೆಗಳಿಗೆ ಕಂಪನಿಯಿಂದ ನಿರಾಕ್ಷೇಪಣಾ ಪ್ರಮಾಣಪತ್ರ (ಎನ್‌ಒಸಿ) ಪಡೆಯಬೇಕು ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ. ಅನುಮತಿ ಇಲ್ಲದೆ ಸಿನಿಮಾಗಳ ಹಕ್ಕು ಖರೀದಿ, ವಿತರಣೆ ಅಥವಾ ಒಟಿಟಿ ಪ್ರದರ್ಶನಕ್ಕೆ ಮುಂದಾದರೆ ಕಾನೂನು ತೊಡಕು ಎದುರಾಗಬಹುದು ಎಂದು ಎಚ್ಚರಿಸಲಾಗಿದೆ.

ಬಾಕಿ ಪಾವತಿಸದಿದ್ದರೆ ಒಪ್ಪಂದದ ವ್ಯಾಪ್ತಿಯ ಸಿನಿಮಾಗಳಲ್ಲಿನ ವರ್ಮಾ ಅವರ ಪಾಲು, ಹಕ್ಕುಗಳು ಹಾಗೂ ಆದಾಯದ ಮೇಲೆ ಹಕ್ಕು ಚಲಾಯಿಸುವುದಾಗಿಯೂ ಕಂಪನಿ ತಿಳಿಸಿದೆ. 'ಸತ್ಯ', 'ಕಂಪನಿ', 'ಸರ್ಕಾರ್'ನಂತಹ ಚಿತ್ರಗಳನ್ನು ನಿರ್ದೇಶಿಸಿರುವ ವರ್ಮಾ ಅವರಿಗೆ ಈ ಬೆಳವಣಿಗೆ ಹೊಸ ಸಂಕಷ್ಟ ತಂದಿದೆ.

ಈಜುಕೊಳದಲ್ಲಿ ವಿದ್ಯುತ್ ಅವಘಡ: ಇಬ್ಬರು ವಿದೇಶಿಯರು ಸಾವು

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಹಲಸೂರು ಕೆರೆ ಸಮೀಪದ ಪಂಚತಾರಾ ಹೋಟೆಲ್‌ನ ಈಜುಕೊಳದಲ್ಲಿ ವಿದ್ಯುತ್ ಪ್ರವಹಿಸಿ ಇಬ್ಬರು ವಿದೇಶಿ ಪ್ರಜೆಗಳು ಮೃತಪಟ್ಟಿದ್ದು, ಮತ್ತಿಬ್ಬರು ಗಾಯಗೊಂಡಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಹೋಟೆಲ್ ಆಡಳಿತ ಮಂಡಳಿ ವಿರುದ್ಧ ಹಲಸೂರು ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದಾರೆ.

ಸ್ಲೋವಾಕಿಯಾ ಮೂಲದ ಜೂರಾಜ್ ಹೋವರ್ತ್ (45) ಮತ್ತು ಜರ್ಮನಿ ಮೂಲದ ಅಲೆಕ್ಸಾಂಡರ್ ಮ್ಯಾಕ್ಸಿಮಿಲಿಯನ್ (57) ಮೃತಪಟ್ಟವರು. ಅಮೆರಿಕ ಮೂಲದ ಮ್ಯಾಥ್ಯೂ ಡಿಸಾಂಟಿಸ್ ಹಾಗೂ ಹೋಟೆಲ್ ಸಿಬ್ಬಂದಿ ರಾಹುಲ್ ತ್ರಿಪಾಠಿ ಗಾಯಗೊಂಡಿದ್ದು, ಇಬ್ಬರನ್ನೂ ಆಸ್ಪತ್ರೆಗೆ ದಾಖಲಿಸಲಾಗಿದೆ.

ಅ.30ರ ರಾತ್ರಿ ಸುಮಾರು 11.30ಕ್ಕೆ ಹೋಟೆಲ್‌ನ ಮೂರನೇ ಮಹಡಿಯಲ್ಲಿರುವ ಈಜುಕೊಳದಲ್ಲಿ ಘಟನೆ ಸಂಭವಿಸಿದೆ. ಈಜುತ್ತಿದ್ದ ವೇಳೆ ವಿದ್ಯುತ್ ಪ್ರವಹಿಸಿರುವ

ಶಂಕೆ ವ್ಯಕ್ತವಾಗಿದೆ. ಜೂರಾಜ್ ನೀರಿನಲ್ಲಿ ಚಲನೆಯಿಲ್ಲದೆ ಬಿದ್ದಿರುವುದನ್ನು ಗಮನಿಸಿದ ಪತ್ನಿ ಹಾಗೂ ಹೋಟೆಲ್ ಸಿಬ್ಬಂದಿ ರಕ್ಷಣೆಗೆ ಮುಂದಾಗಿದ್ದಾರೆ. ಈ ವೇಳೆ ಸಿಬ್ಬಂದಿ ರಾಹುಲ್ ಮತ್ತು ಮ್ಯಾಥ್ಯೂ ಅವರಿಗೂ ವಿದ್ಯುತ್ ಸ್ಪರ್ಶಿಸಿ ಗಾಯಗಳಾಗಿವೆ. ಬಳಿಕ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಗಾಯಾಳುಗಳನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದೆ.

ಮೃತ ಜೂರಾಜ್ ಅವರ ಪತ್ನಿ ನೀಡಿದ ದೂರಿನ ಮೇರೆಗೆ ಪೊಲೀಸರು ಬಿಎನ್‌ಎಸ್ ಸೆಕ್ಷನ್ 106ರ ಅಡಿಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಘಟನಾ ಸ್ಥಳದ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದ್ದು, ಹೋಟೆಲ್ ಸಿಬ್ಬಂದಿ ಹಾಗೂ ಪ್ರತ್ಯಕ್ಷದರ್ಶಿಗಳ ಹೇಳಿಕೆಗಳನ್ನು ಪಡೆಯಲಾಗುತ್ತಿದೆ. ವಿದ್ಯುತ್ ಅವಘಡಕ್ಕೆ ನಿಖರ ಕಾರಣವೇನು ಮತ್ತು ನಿರ್ಲಕ್ಷ್ಯ ನಡೆದಿದೆಯೇ ಎಂಬ ಬಗ್ಗೆ ತನಿಖೆ ಮುಂದುವರಿದಿದೆ.

ಘಟನೆ ಕುರಿತು ಪ್ರತಿಕ್ರಿಯಿಸಿರುವ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್, ವಿದ್ಯುತ್ ಆಘಾತದಿಂದ ಸಾವು ಸಂಭವಿಸಿರುವ ಮಾಹಿತಿ ಲಭ್ಯವಾಗಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಇಬ್ಬರು ಅತಿಥಿಗಳ ಸಾವಿಗೆ ತೀವ್ರ ಸಂತಾಪ ವ್ಯಕ್ತಪಡಿಸಿರುವ ಹೋಟೆಲ್ ಆಡಳಿತ ಮಂಡಳಿ, ಘಟನೆಯ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ಸ್ಥಳೀಯ ಅಧಿಕಾರಿಗಳು ನಡೆಸುತ್ತಿರುವ ತನಿಖೆಗೆ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಹೇಳಿದೆ.

ಕರ್ನಾಟಕಕ್ಕೆ ರೂ 4,504 ಕೋಟಿ ತೆರಿಗೆ ಪಾಲು ಬಿಡುಗಡೆ

● ವಿಕ್ರಮ ವಾಹಿನಿ । ನವದೆಹಲಿ

ಬರಗಾಲದ ಸಂಕಷ್ಟ ಎದುರಿಸುತ್ತಿರುವ ಕರ್ನಾಟಕಕ್ಕೆ ಕೇಂದ್ರ ಸರ್ಕಾರ ಹೆಚ್ಚುವರಿ ತೆರಿಗೆ ಪಾಲಿನ ರೂಪದಲ್ಲಿ ರೂ 4,504 ಕೋಟಿ ಬಿಡುಗಡೆ ಮಾಡಿದೆ. ದೇಶದ ಎಲ್ಲ ರಾಜ್ಯಗಳಿಗೆ ಒಟ್ಟು ರೂ 1,09,019 ಕೋಟಿ ತೆರಿಗೆ ಪಾಲನ್ನು ಶನಿವಾರ ಹಂಚಿಕೆ ಮಾಡಲಾಗಿದ್ದು, ಕರ್ನಾಟಕದ ಪಾಲಿನ ಮೊತ್ತವೂ ಇದರಲ್ಲಿ ಸೇರಿದೆ.

ರಾಜ್ಯಗಳಿಗೆ ಪ್ರತಿ ತಿಂಗಳು ನೀಡುವ ನಿಯಮಿತ ತೆರಿಗೆ ಪಾಲಿನ ಜೊತೆಗೆ ಈ ಹೆಚ್ಚುವರಿ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ. ಪ್ರಸಕ್ತ ಹಣಕಾಸು ವರ್ಷದಲ್ಲಿ ಕೇಂದ್ರ ಸರ್ಕಾರ ಎರಡನೇ ಬಾರಿಗೆ ಹೆಚ್ಚುವರಿ ತೆರಿಗೆ ಪಾಲನ್ನು ಹಂಚಿಕೆ ಮಾಡಿದೆ.

ಮುಂಬರುವ ಹಬ್ಬದ ಋತುವನ್ನು ಗಮನದಲ್ಲಿಟ್ಟುಕೊಂಡು ಹಾಗೂ ರಾಜ್ಯಗಳ ಬಂಡವಾಳ ವೆಚ್ಚಕ್ಕೆ ವೇಗ ನೀಡುವ ಉದ್ದೇಶದಿಂದ ಈ ಮೊತ್ತ ಬಿಡುಗಡೆ ಮಾಡಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ. ಇದರಿಂದ ರಾಜ್ಯಗಳ ಅಭಿವೃದ್ಧಿ ಮತ್ತು ಕಲ್ಯಾಣ ಯೋಜನೆಗಳ ವೆಚ್ಚ ನಿರ್ವಹಣೆಗೆ ನೆರವಾಗಲಿದೆ.

ಈ ಬಾರಿ ಉತ್ತರ ಪ್ರದೇಶಕ್ಕೆ ಅತಿ ಹೆಚ್ಚು ರೂ 19,208 ಕೋಟಿ ಬಿಡುಗಡೆಯಾಗಿದ್ದರೆ, ಬಿಹಾರಕ್ಕೆ ರೂ 10,845 ಕೋಟಿ, ಮಧ್ಯಪ್ರದೇಶಕ್ಕೆ ರೂ 8,010 ಕೋಟಿ, ಪಶ್ಚಿಮ ಬಂಗಾಳಕ್ಕೆ ರೂ 7,866 ಕೋಟಿ ಹಾಗೂ ಮಹಾರಾಷ್ಟ್ರಕ್ಕೆ ರೂ 7,022 ಕೋಟಿ ಹಂಚಿಕೆಯಾಗಿದೆ. ಕರ್ನಾಟಕಕ್ಕೆ ರೂ 4,504 ಕೋಟಿ, ಆಂಧ್ರಪ್ರದೇಶಕ್ಕೆ ರೂ 4,597 ಕೋಟಿ, ಒಡಿಶಾಕ್ಕೆ ರೂ 4,819 ಕೋಟಿ ಹಾಗೂ ತಮಿಳುನಾಡಿಗೆ ರೂ 4,466 ಕೋಟಿ ನೀಡಲಾಗಿದೆ. ಕೇಂದ್ರ ಸರ್ಕಾರ ಸಂಗ್ರಹಿಸುವ ಒಟ್ಟು ತೆರಿಗೆಯಲ್ಲಿ ಶೇ.41ರಷ್ಟನ್ನು ಹಣಕಾಸು ಆಯೋಗದ ಶಿಫಾರಸಿನಂತೆ ರಾಜ್ಯಗಳಿಗೆ ಹಂಚಿಕೆ ಮಾಡಲಾಗುತ್ತದೆ. ಸಾಮಾನ್ಯವಾಗಿ 14 ಕಂತುಗಳಲ್ಲಿ ಈ ಮೊತ್ತ ಬಿಡುಗಡೆ ಮಾಡಲಾಗುತ್ತದೆ. ಹೆಚ್ಚುವರಿ ಕಂತಿನ ಹಂಚಿಕೆಯಿಂದ ರಾಜ್ಯಗಳ ಆರ್ಥಿಕ ನಿರ್ವಹಣೆ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಮತ್ತಷ್ಟು ನೆರವಾಗಲಿದೆ.

ಸಾಮಾನ್ಯವಾಗಿ ಕೇಂದ್ರ ಸರ್ಕಾರವು ಪ್ರತಿ ತಿಂಗಳು ರಾಜ್ಯಗಳಿಗೆ ತೆರಿಗೆ ಪಾಲನ್ನು ಬಿಡುಗಡೆ ಮಾಡುತ್ತದೆ. ಆದರೆ ಹೆಚ್ಚುವರಿ ಕಂತಿನ ರೂಪದಲ್ಲಿ ಮೊತ್ತ ಬಿಡುಗಡೆ ಮಾಡುವುದರಿಂದ ರಾಜ್ಯಗಳ ಕೈಯಲ್ಲಿ ಹೆಚ್ಚಿನ ಸಂಪನ್ಮೂಲ ಲಭ್ಯವಾಗಲಿದ್ದು, ವಿವಿಧ ಇಲಾಖೆಗಳ ಬಾಕಿ ವೆಚ್ಚಗಳು ಹಾಗೂ ಸಾರ್ವಜನಿಕ ಸೇವೆಗಳ ನಿರ್ವಹಣೆಗೆ ಅನುಕೂಲವಾಗಲಿದೆ. ವಿಶೇಷವಾಗಿ ಆರ್ಥಿಕ ಒತ್ತಡ ಎದುರಿಸುತ್ತಿರುವ ರಾಜ್ಯಗಳಿಗೆ ಈ ಅನುದಾನ ಮಹತ್ವದ್ದಾಗಿದೆ.

ಬಂಡವಾಳ ವೆಚ್ಚ ಹೆಚ್ಚಿಸುವ ಮೂಲಕ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ನೀಡುವುದು ಹಾಗೂ ಜನಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನಕ್ಕೆ ನೆರವಾಗುವುದು ಹೆಚ್ಚುವರಿ ತೆರಿಗೆ ಹಂಚಿಕೆಯ ಪ್ರಮುಖ ಉದ್ದೇಶವಾಗಿದೆ. ಇದರಿಂದ ರಾಜ್ಯದ ಅಭಿವೃದ್ಧಿ ಯೋಜನೆಗಳಿಗೆ ಅಗತ್ಯವಿರುವ ಆರ್ಥಿಕ ಸಂಪನ್ಮೂಲ ಮತ್ತಷ್ಟು ಬಲ ದೊರೆಯಲಿದೆ.

ಬೋಟ್‌ಗಳ ಒಳಗೆ ಸಾವಿನ ವಿಷಾನಿಲ: 100 ಪಿಪಿಎಂ ಪತ್ತೆ

● ವಿಕ್ರಮ ವಾಹಿನಿ । ಕಾರವಾರ

ಮೀನುಗಾರಿಕಾ ಬೋಟ್‌ಗಳ ಮೀನಿನ ಸಂಗ್ರಹಣಾ ಪೆಟ್ಟಿಗೆಗಳಲ್ಲಿ ಉತ್ಪತ್ತಿಯಾಗುವ ಹೈಡ್ರೋಜನ್ ಸಲ್ಫೈಡ್ ವಿಷಾನಿಲ ಕಾರ್ಮಿಕರ ಜೀವಕ್ಕೆ ಕಂಟಕವಾಗುತ್ತಿದೆ. ಮುದಗಾ ಬಂದರಿನಲ್ಲಿ ಇಬ್ಬರು ಕಾರ್ಮಿಕರು ಮೃತಪಟ್ಟ ಘಟನೆ ಬಳಿಕ ಎನ್‌ಡಿಆರ್‌ಎಫ್ ನಡೆಸಿದ ಪರಿಶೀಲನೆಯಲ್ಲಿ ಮತ್ತೆರಡು ಬೋಟ್‌ಗಳಲ್ಲಿ 100 ಪಿಪಿಎಂ ಪ್ರಮಾಣದ ವಿಷಾನಿಲ ಪತ್ತೆಯಾಗಿದೆ. ಇದು ಸಾಮಾನ್ಯ ಸುರಕ್ಷತಾ ಮಿತಿಯೆಂದು ಉಲ್ಲೇಖಿಸಿರುವ 10 ಪಿಪಿಎಂ ಮಟ್ಟಕ್ಕಿಂತ ಹತ್ತು ಪಟ್ಟು ಹೆಚ್ಚಾಗಿದೆ.

ಮುದಗಾ ಬಂದರಿನಲ್ಲಿ 'ಶ್ರೀ ಮೂಕಾಂಬಿಕಾ' ಬೋಟ್‌ನ ಮೀನಿನ ಸಂಗ್ರಹಣಾ ಪೆಟ್ಟಿಗೆ ಸ್ವಚ್ಛಗೊಳಿಸುವಾಗ ವಿಷಾನಿಲ ಸೇವಿಸಿ ಒಡಿಶಾ ಮೂಲದ ಲಲಿಂದ್ರ ಧರುವಾ (41) ಮತ್ತು ಪುರಂದರ ಬಿಸ್ರಾ (21) ಮೃತಪಟ್ಟಿದ್ದಾರೆ. ಆಕಾಶ್ ನಾಯಕ್ (24) ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ.

ಗೋಕರ್ಣದ ತದಡಿ ಬಂದರಿನಲ್ಲಿ ಇದೇ ರೀತಿಯ ಘಟನೆಯಲ್ಲಿ ಮೂವರು ಮೃತಪಟ್ಟಿದ್ದು, ಒಂದೇ ವಾರದಲ್ಲಿ ಐವರು ಜೀವ ಕಳೆದುಕೊಂಡಿದ್ದಾರೆ.

ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಅವರು ಮೀನುಗಾರರಿಗೆ ವಿಶೇಷ ಜಾಗೃತಿ ತರಬೇತಿ ನೀಡುವುದಾಗಿ ತಿಳಿಸಿದ್ದಾರೆ. ಬೋಟ್‌ಗಳಲ್ಲಿ ಗ್ಯಾಸ್ ಡಿಟೆಕ್ಟರ್ ಅಳವಡಿಕೆ ಹಾಗೂ ಪ್ರಯಾಣಕ್ಕೂ ಮುನ್ನ ಅನಿಲ ಪರೀಕ್ಷಿಸುವ ವ್ಯವಸ್ಥೆ ರೂಪಿಸುವ ಬಗ್ಗೆಯೂ ಚಿಂತನೆ ನಡೆದಿದೆ. ಅಸ್ವಸ್ಥರನ್ನು ಆಸ್ಪತ್ರೆಗೆ ಸಾಗಿಸಲು ಆಂಬ್ಯುಲೆನ್ಸ್ ವಿಳಂಬವಾಯಿತು ಎಂದು ಬೋಟ್ ಸಹಮಾಲೀಕ ರಾಘವೇಂದ್ರ ಆರೋಪಿಸಿದ್ದಾರೆ.

ಹೆದ್ದಾರಿ ತಡೆದು ರೈತರ ಪ್ರತಿಭಟನೆ: ನಾಳೆ ಜೈಲ್ ಭರೋ ಎಚ್ಚರಿಕೆ

● ವಿಕ್ರಮ ವಾಹಿನಿ । ಅಥಣಿ

ಕಬ್ಬಿಗೆ ಸೂಕ್ತ ಬೆಂಬಲ ಬೆಲೆ ಹಾಗೂ ಪ್ರತಿ ಟನ್‌ಗೆ ಕನಿಷ್ಠ 1,000 ರೂ. ಹೆಚ್ಚುವರಿ ದರ ನೀಡುವಂತೆ ಆಗ್ರಹಿಸಿ ಕಬ್ಬು ಬೆಳೆಗಾರರ ಹೋರಾಟ ತೀವ್ರಗೊಂಡಿದೆ. ಸರ್ಕಾರಗಳ ನಿರ್ಲಕ್ಷ್ಯ ಖಂಡಿಸಿ ಬೆಳಗಾವಿ ಜಿಲ್ಲೆಯ ಅಥಣಿಯಲ್ಲಿ ರೈತರು ವಿಜಯಪುರ–ಸಂಕೇಶ್ವರ ರಾಷ್ಟ್ರೀಯ ಹೆದ್ದಾರಿ ತಡೆದು ರಸ್ತೆ ಮಧ್ಯೆಯೇ ಊಟ ಮಾಡುವ ಮೂಲಕ ಪ್ರತಿಭಟನೆ ನಡೆಸಿದರು.

ಅಥಣಿಯ ಬಸವೇಶ್ವರ ವೃತ್ತದಲ್ಲಿ ರೈತರು ಮತ್ತು ರೈತ ಸಂಘಟನೆಗಳ ಮುಖಂಡರು ಜಮಾಯಿಸಿ, ಬೃಹತ್ ಲಾರಿಗಳನ್ನು ರಸ್ತೆಗೆ ಅಡ್ಡಲಾಗಿ ನಿಲ್ಲಿಸಿದರು. ಇದರಿಂದ ವಾಹನ ಸಂಚಾರ ಅಸ್ತವ್ಯಸ್ತಗೊಂಡಿತು. ಶಶಿಕಾಂತ್ ಗುರೂಜಿ ಮತ್ತು ಚುನ್ನಪ್ಪ ಪೂಜಾರಿ ನೇತೃತ್ವದಲ್ಲಿ ನಡೆಯುತ್ತಿರುವ ಹೋರಾಟದಲ್ಲಿ ರೈತರು ಸರ್ಕಾರಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ನಾಳೆ ಕನ್ನಡ ರಾಜ್ಯೋತ್ಸವ ಆಚರಣೆಗೆ ಯಾವುದೇ ಅಡ್ಡಿಪಡಿಸುವುದಿಲ್ಲ. ಬೆಳಗ್ಗೆ 10 ಗಂಟೆಗೆ ರಾಜ್ಯೋತ್ಸವ ಆಚರಿಸಿ, 11 ಗಂಟೆಗೆ ಸಾಮೂಹಿಕವಾಗಿ 'ಜೈಲ್ ಭರೋ' ಚಳವಳಿ ನಡೆಸಲಾಗುವುದು. ಬಂಧಿಸಿದರೂ ಹೋರಾಟ ನಿಲ್ಲಿಸುವುದಿಲ್ಲ ಎಂದು ರೈತ ಮುಖಂಡ ಪ್ರಕಾಶ್ ಪೂಜಾರಿ ಎಚ್ಚರಿಸಿದರು.

ತಮಿಳುನಾಡು ಸರ್ಕಾರದ ಮಾದರಿಯಲ್ಲಿ ಕರ್ನಾಟಕವೂ ಕಬ್ಬಿಗೆ ಕನಿಷ್ಠ 1,000 ರೂ. ಹೆಚ್ಚುವರಿ ದರ ನೀಡಬೇಕು. ಸ್ವಾಮಿನಾಥನ್ ವರದಿ ಜಾರಿಗೊಳಿಸಿ, ಕಬ್ಬಿಗೆ 4,500 ರೂ.ಗಿಂತ ಹೆಚ್ಚಿನ ಬೆಂಬಲ ಬೆಲೆ ನಿಗದಿಪಡಿಸಬೇಕು. ರೈತರು ಸರ್ಕಾರದ ಉಚಿತ ಯೋಜನೆಗಳನ್ನು ಕೇಳುತ್ತಿಲ್ಲ; ಬೆವರಿನ ದುಡಿಮೆಗೆ ನ್ಯಾಯಯುತ ಬೆಲೆ ಕೇಳುತ್ತಿದ್ದಾರೆ ಎಂದು ಹೇಳಿದರು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮತ್ತು ಪ್ರಧಾನಿ ನರೇಂದ್ರ ಮೋದಿ ಕೂಡಲೇ ಮಧ್ಯಪ್ರವೇಶಿಸಬೇಕು ಎಂದು ಆಗ್ರಹಿಸಿದರು.

ಸಿಎಂಗೆ ಗುಲಾಬಿ ಹಾರದ ಸ್ವಾಗತದ ಸವಾಲು

ರೈತ ಮುಖಂಡ ಶಶಿಕಾಂತ್ ಗುರೂಜಿ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯೋತ್ಸವ ಕಾರ್ಯಕ್ರಮದ ಬಳಿಕ ಗುರಲಾಪುರಕ್ಕೆ ಆಗಮಿಸಿ ರೈತರ ಬೇಡಿಕೆಯಂತೆ 1,000 ರೂ. ಹೆಚ್ಚುವರಿ ದರ ಘೋಷಿಸಲಿ. ಹಾಗೆ ಮಾಡಿದರೆ ಒಂದು ಲಕ್ಷ ರೂ. ಮೌಲ್ಯದ ಗುಲಾಬಿ ಹಾರ ಹಾಕಿ ಸ್ವಾಗತಿಸುತ್ತೇವೆ. ಇಲ್ಲದಿದ್ದರೆ ರೈತರ ಶಕ್ತಿ ಏನೆಂಬುದನ್ನು ತೋರಿಸುತ್ತೇವೆ ಎಂದು ಸವಾಲು ಹಾಕಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಎಸ್‌ಎಪಿ ಹಾಗೂ ಎಂಎಸ್‌ಪಿ ವಿಚಾರದಲ್ಲಿ ಪರಸ್ಪರ ಹೊಣೆ ಹೊರಿಸುತ್ತಿವೆ. ರೈತರ ಸಮಸ್ಯೆಗೆ ಪರಿಹಾರ ನೀಡುವ ಬದಲು ಬೀದಿಗೆ ತಳ್ಳಿವೆ. ಜನಪ್ರತಿನಿಧಿಗಳೂ ರೈತರ ಪರವಾಗಿ ಧ್ವನಿ ಎತ್ತುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗುರಲಾಪುರದಲ್ಲಿ ರೈತರ ಹೋರಾಟ ನಿರಂತರವಾಗಿ ನಡೆಯಲಿದ್ದು, ಸರ್ಕಾರ ಸ್ಪಂದಿಸಲು ನಾಳೆ ಸಂಜೆಯವರೆಗೆ ಕಾಲಾವಕಾಶ ನೀಡಲಾಗಿದೆ. ಬೇಡಿಕೆ ಈಡೇರದಿದ್ದರೆ ಜೈಲ್ ಭರೋ ಚಳವಳಿ ಮುಂದುವರಿಸಲಾಗುವುದು. ಜಾತಿ, ಧರ್ಮ ಹಾಗೂ ಪಕ್ಷಭೇದ ಮರೆತು ರೈತರು ಒಂದಾಗಿದ್ದಾರೆ. ಸಕ್ಕರೆ ಕಾರ್ಖಾನೆಗಳ ಕಾರ್ಯಾಚರಣೆಯ ನಿರ್ಧಾರದಲ್ಲಿಯೂ ರೈತರ ಒಗ್ಗಟ್ಟಿನ ಶಕ್ತಿ ಪ್ರದರ್ಶಿಸಲಾಗುವುದು ಎಂದು ಎಚ್ಚರಿಸಿದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

ಸವಿ ವಾಹಿನಿ

ಸೋಲೆಂಬ ರೋಗಕ್ಕೆ ಆತ್ಮವಿಶ್ವಾಸ ಮತ್ತು ಕಠಿಣ ಪರಿಶ್ರಮವೇ ದೊಡ್ಡ ಮದ್ದು. ಇದು ಯಾರಲ್ಲಿರುತ್ತದೆಯೋ ಅವರಿಗೆ ಯಶಸ್ಸು ಕಟ್ಟಿಟ್ಟಬುತ್ತಿ.

ದಿನ ಪಂಚಾಂಗ

ನವಂಬರ್, 01–2026, ಭಾನುವಾರ ಶರದ್ ಋತು, ಆಶ್ವಯುಜ ಮಾಸ, ಬಹುಳ ಪಕ್ಷ
ಸಪ್ತಮಿ ತಿಥಿ ರಾ.7:00, ಪುನರ್ವಸು ನಕ್ಷತ್ರ ಬೆ.10:35
ರಾಹುಕಾಲ ಸಾ 4:26–5:54, ಸರ್ವ ಸಂತರ ದಿನ, ಮಾಣಿಕಪ್ರಭು ಪುಣ್ಯದಿನ, ಕೂಡ್ಲಿ ವಿದ್ಯಾಭಿನವ ನೃಸಿಂಹಭಾರತೀ ಪೀಠಾರೋಹಣ ದಿನ, ಕೂಡ್ಲಿ ವಿದ್ಯಾಭಿನವ ನರಸಿಂಹ ಭಾರತಿ ಪೀಠಾರೋಹಣ, ಸಾರಮಂಗಲ ನಾರಾಯಣಯತಿ ಆರಾಧನೆ

ಆರೋಗ್ಯ

ಖಾಲಿ ಹೊಟ್ಟೆಯಲ್ಲಿ ಅಲೋವೆರಾ ಜ್ಯೂಸ್ ಕುಡಿಯುವುದು ಸುರಕ್ಷಿತವೇ?

ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ಅಲೋವೆರಾ ಜ್ಯೂಸ್ ಕುಡಿಯುವುದರಿಂದ ಆರೋಗ್ಯಕ್ಕೆ ಹಲವು ಪ್ರಯೋಜನಗಳಿವೆ ಎಂಬ ನಂಬಿಕೆಯಿದೆ. ತೂಕ ಇಳಿಕೆ, ಚರ್ಮದ ಕಾಂತಿ ಮತ್ತು ಜೀರ್ಣಕ್ರಿಯೆ ಸುಧಾರಣೆಗಾಗಿ ಕೆಲವರು ಇದನ್ನು ಪ್ರತಿದಿನ ಸೇವಿಸುತ್ತಾರೆ. ಆದರೆ ಅಲೋವೆರಾ ಜ್ಯೂಸ್ ಎಲ್ಲರಿಗೂ ಸುರಕ್ಷಿತವಲ್ಲ. ಅದರಲ್ಲಿರುವ ಕೆಲವು ಅಂಶಗಳು ಆರೋಗ್ಯದ ಮೇಲೆ ಅಡ್ಡಪರಿಣಾಮ ಬೀರಬಹುದು.

ಜೀರ್ಣಕ್ರಿಯೆಗೆ ಎಷ್ಟು ಸಹಕಾರಿ?: ಅಲೋವೆರಾದಲ್ಲಿ ಉತ್ಕರ್ಷಣ ನಿರೋಧಕ ಗುಣ ಹೊಂದಿರುವ ಕೆಲವು ಸಂಯುಕ್ತಗಳಿವೆ. ಇದರಲ್ಲಿರುವ ಅಂಶಗಳು ಮಲವಿಸರ್ಜನೆಗೆ ಸಹಾಯ ಮಾಡಬಹುದು. ಆದರೆ ಅಲೋಯಿನ್ ಎಂಬ ಪದಾರ್ಥ ಅತಿಸಾರ ಮತ್ತು ಹೊಟ್ಟೆನೋವಿಗೆ ಕಾರಣವಾಗಬಹುದು. ಅಲೋವೆರಾ ಜ್ಯೂಸ್ ಕುಡಿಯುವುದರಿಂದ ದೇಹದ ಕೊಬ್ಬು ಕರಗುತ್ತದೆ ಅಥವಾ ರಕ್ತ ಶುದ್ಧಿಯಾಗುತ್ತದೆ ಎಂಬುದಕ್ಕೆ ಬಲವಾದ ವೈಜ್ಞಾನಿಕ ಪುರಾವೆಗಳಿಲ್ಲ. ತೂಕ ನಿಯಂತ್ರಣಕ್ಕೆ ಸಮತೋಲಿತ ಆಹಾರ ಮತ್ತು ವ್ಯಾಯಾಮವೇ ಮುಖ್ಯ.

ಅಡ್ಡಪರಿಣಾಮಗಳ ಬಗ್ಗೆ ಎಚ್ಚರಿಕೆ: ಅಲೋವೆರಾ ಜ್ಯೂಸ್ ಸೇವನೆಯಿಂದ ಕೆಲವರಿಗೆ ಹೊಟ್ಟೆನೋವು, ಸೆಳೆತ ಮತ್ತು ಅತಿಸಾರ ಉಂಟಾಗಬಹುದು. ಅಲೋಯಿನ್ ಅಂಶ ಹೆಚ್ಚಿರುವ ರಸವನ್ನು ಸೇವಿಸಿದರೆ ದೇಹದಲ್ಲಿ ನೀರು ಮತ್ತು ಅಗತ್ಯ ಲವಣಗಳ ಕೊರತೆ ಉಂಟಾಗುವ ಅಪಾಯವಿದೆ. ಅಲ್ಲದೆ, ರಕ್ತದಲ್ಲಿನ ಸಕ್ಕರೆ ಮಟ್ಟದ ಮೇಲೂ ಪರಿಣಾಮ ಬೀರಬಹುದು.

ಯಾರು ಸೇವಿಸಬಾರದು?: ಮಧುಮೇಹಕ್ಕೆ ಔಷಧಿ ತೆಗೆದುಕೊಳ್ಳುವವರು, ಮೂತ್ರವರ್ಧಕ ಔಷಧಿ ಬಳಸುವವರು ಹಾಗೂ ಮೂತ್ರಪಿಂಡ ಅಥವಾ ಕರುಳಿನ ಸಮಸ್ಯೆ ಇರುವವರು ವೈದ್ಯರ ಸಲಹೆಯಿಲ್ಲದೆ ಅಲೋವೆರಾ ಜ್ಯೂಸ್ ಕುಡಿಯಬಾರದು. ಗರ್ಭಿಣಿಯರು ಮತ್ತು ಹಾಲುಣಿಸುವ ತಾಯಂದಿರು ಇದರ ಸೇವನೆಯನ್ನು ತಪ್ಪಿಸುವುದು ಉತ್ತಮ. ಅಲೋವೆರಾ ಜ್ಯೂಸ್ ಖರೀದಿಸುವಾಗ ಅಲೋಯಿನ್ ತೆಗೆದುಹಾಕಿರುವುದಾಗಿ ನಮೂದಿಸಿರುವ, ಗುಣಮಟ್ಟದ ಮಾನದಂಡಗಳನ್ನು ಪಾಲಿಸುವ ಉತ್ಪನ್ನಗಳಿಗೆ ಆದ್ಯತೆ ನೀಡಬೇಕು. ಮನೆಯಲ್ಲಿ ತಯಾರಿಸುವಾಗ ಎಲೆಯಲ್ಲಿರುವ ಹಳದಿ ಬಣ್ಣದ ರಸವನ್ನು ಸಂಪೂರ್ಣವಾಗಿ ತೆಗೆದು ಹಾಕುವುದು ಮುಖ್ಯ. ಆದರೂ ಮನೆಯಲ್ಲೇ ತಯಾರಿಸಿದ ರಸ ಸಂಪೂರ್ಣ ಸುರಕ್ಷಿತ ಎಂದು ಖಚಿತಪಡಿಸಲಾಗುವುದಿಲ್ಲ. ಖಾಲಿ ಹೊಟ್ಟೆಯಲ್ಲಿ ಕುಡಿಯುವುದರಿಂದ ವಿಶೇಷ ಪ್ರಯೋಜನ ಸಿಗುತ್ತದೆ ಎಂಬುದಕ್ಕೂ ಖಚಿತ ಪುರಾವೆಗಳಿಲ್ಲ. ಆರೋಗ್ಯ ಸಮಸ್ಯೆಗಳಿದ್ದರೆ ಸೇವಿಸುವ ಮೊದಲು ವೈದ್ಯರ ಸಲಹೆ ಪಡೆಯುವುದು ಸೂಕ್ತ.

ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಬಿಸಿಯೂಟ ಸೇವನೆ ಮಾಡಿದ ರಾಮಲಿಂಗಾರೆಡ್ಡಿ

● ವಿಕ್ರಮ ವಾಹಿನಿ । ಬೆಂಗಳೂರು

ಅನ್ನದ ಮಹತ್ವ ಅರಿತವರಿಗೇ ಗೊತ್ತು. ಅಧಿಕಾರಿಶಾಹಿಗಳು ಮೃಷ್ಟಾನ್ನ ಭೋಜನ ಸವಿಯುವ ಪರಿಪಾಠ ಬೆಳೆಸಿಕೊಂಡಿರುತ್ತಾರೆ. ಸಾಮಾನ್ಯರಂತೆ ಎಲ್ಲಿ ಬೇಕಾದರೂ ಅವರು ಭೋಜನ ಸವಿಯುವುದಿಲ್ಲ ಎನ್ನುವ ಜನರ ನಂಬಿಕೆ ಇರುತ್ತದೆ. ಇದಕ್ಕೆ ತದ್ವಿರುದ್ಧವಾಗಿ ಜನಸಾಮಾನ್ಯರಂತೆ ಶಾಲೆಯೊಂದರ ಬಿಸಿಯೂಟ ಸೇವನೆ ಮಾಡಿದ ಕರ್ನಾಟಕ ಸರ್ಕಾರದ ಸಚಿವ ಸಂಪುಟದ ಹಿರಿಯ ಮಂತ್ರಿಗಳಾದ ರಾಮಲಿಂಗಾರೆಡ್ಡಿ ಅವರು ಖುದ್ದು ಬಿಸಿಯೂಟ ಸವಿಯುವ ಮೂಲಕ ಶಾಲಾ ಮಕ್ಕಳು, ಶಿಕ್ಷಕರು ಮತ್ತು ನಾಗರಿಕರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ.

ಎಂದಿನಂತೆ ತಮ್ಮ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ ಸಚಿವರಾದ ತೆರಳಿದ್ದರು. ಆಡುಗೋಡಿ ಸಿಎಆರ್ ಪೊಲೀಸ್ ಕ್ವಾರ್ಟರ್ಸ್ ನಲ್ಲಿ ಇರುವ ಸರ್ಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿದಾಗ ಅಲ್ಲಿದ್ದ ಬಿಸಿಊಟ ಸೇವನೆ ಮಾಡಿದರು. ಬಿಸಿಯೂಟ ಸಿಬ್ಬಂದಿ ಸಚಿವರಿಗೆ ತಟ್ಟೆಯಲ್ಲಿ ಅನ್ನ, ಸಾಂಬಾರು ಬಡಿಸಿದರು. ಸಚಿವರು ಬಿಸಿಯೂಟವನ್ನು ಚಪ್ಪರಿಸಿ ಊಟ ಮಾಡಿ, ರುಚಿ, ಶುಚಿಯಾಗಿ ಚೆನ್ನಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಅಂದಹಾಗೆ, ಶಾಲಾ ಮಕ್ಕಳಿಗೆ ಉತ್ತಮ ಪೋಷಕಾಂಶಭರಿತ ಆಹಾರವನ್ನು ಒದಗಿಸುವ ದೃಷ್ಟಿಯಿಂದ 2002–03ನೇ ಸಾಲಿನಿಂದ ಕರ್ನಾಟಕ ಸರ್ಕಾರ ಈ ಬಿಸಿಊಟ ಯೋಜನೆಯನ್ನು ಪ್ರಾರಂಭಿಸಿದೆ. ಅದು ಇಂದಿಗೂ ಚಾಚೂ ತಪ್ಪದೇ ಮುಂದುವರಿದಿದ್ದು ಆಡುಗೋಡಿಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ವಿತರಿಸುವ ಬಿಸಿಯೂಟದ ಸಿಬ್ಬಂದಿಗಳಿಗೆ ಸಚಿವರು ಫುಲ್ ಮಾರ್ಕ್ಸ್ ನೀಡಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಕಾರ್ಯಕರ್ತರ ಕಾಣಿಕೆಯಿಂದಲೇ ಇಂದಿರಾ ಭವನ ನಿರ್ಮಾಣವಾಗಲಿ: ಡಿಕೆಶಿ



● ವಿಕ್ರಮ ವಾಹಿನಿ । ಮಂಡ್ಯ

ಕಾಂಗ್ರೆಸ್ ಕಾರ್ಯಕರ್ತರ ಬೆವರಿನ ಕಾಣಿಕೆಯಿಂದ ಮಂಡ್ಯದಲ್ಲಿ ಇಂದಿರಾ ಭವನ ನಿರ್ಮಾಣವಾಗಬೇಕು. ಇದು ಕೇವಲ ಪಕ್ಷದ ಕಚೇರಿಯಾಗದೆ ಪ್ರತಿಯೊಬ್ಬ ಕಾರ್ಯಕರ್ತನ ಸ್ವಾಭಿಮಾನದ ಸಂಕೇತವಾಗಬೇಕು ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಮಂಡ್ಯದ ಹೊಳಲು ವೃತ್ತದ ಬಳಿ ಜಿಲ್ಲಾ ಕಾಂಗ್ರೆಸ್ ಸಮಿತಿಯ ಇಂದಿರಾ ಭವನ ನಿರ್ಮಾಣಕ್ಕೆ ಶನಿವಾರ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ದೇವಸ್ಥಾನ ನಿರ್ಮಾಣಕ್ಕೆ ಮನೆಮನೆಗೆ ತೆರಳಿ ಚಂದಾ ಸಂಗ್ರಹಿಸುವಂತೆ ಕಾರ್ಯಕರ್ತರು ತಮ್ಮ ಶಕ್ತ್ಯಾನುಸಾರ ₹100ರಿಂದ ₹10 ಲಕ್ಷದವರೆಗೆ ಕಾಣಿಕೆ ನೀಡಬೇಕು. ಎಲ್ಲರೂ ಸೇರಿ ನಿರ್ಮಿಸಿದಾಗ ಮಾತ್ರ ಭವನದ ಮೇಲೆ ಆತ್ಮೀಯತೆ ಮತ್ತು ಅಭಿಮಾನ ಮೂಡುತ್ತದೆ ಎಂದರು.

ಮಂಡ್ಯ ಜಿಲ್ಲೆಯ ಏಳೂ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸುವ ಗುರಿಯೊಂದಿಗೆ ಈಗಿನಿಂದಲೇ ಪಕ್ಷ ಸಂಘಟಿಸಬೇಕು. ವೈಯಕ್ತಿಕ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಮುಂದಿನ ಮೂರರಿಂದ ನಾಲ್ಕು ತಿಂಗಳಲ್ಲಿ ಜಿಲ್ಲಾ, ತಾಲೂಕು, ಗ್ರಾಮ ಪಂಚಾಯಿತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಎದುರಾಗಲಿದ್ದು, ಕಾರ್ಯಕರ್ತರು ಸಿದ್ಧತೆ ಮಾಡಿಕೊಳ್ಳಬೇಕು. 2028ರಲ್ಲೂ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ತ್ಯಾಗ ಮತ್ತು ದೇಶಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸಿದ ಅವರು, ದೇಶದ ಐಕ್ಯತೆ, ಸಮಗ್ರತೆ ಹಾಗೂ ಶಾಂತಿಗಾಗಿ ಅವರು ಪ್ರಾಣವನ್ನೇ ತ್ಯಾಗ ಮಾಡಿದ್ದಾರೆ. ಅವರ ಹೆಸರಿನಲ್ಲಿ ನಿರ್ಮಾಣವಾಗುವ ಭವನ ಕಾರ್ಯಕರ್ತರಿಗೆ ಶಕ್ತಿ ತುಂಬುವ ಕೇಂದ್ರವಾಗಬೇಕು ಎಂದರು.

ಪ್ರತಿ ಪಂಚಾಯಿತಿಯಲ್ಲಿ ಗ್ಯಾರಂಟಿ ಸಮಿತಿ

ಗ್ಯಾರಂಟಿ ಯೋಜನೆಗಳ ಫಲಾನುಭವಿಗಳೇ ಪಕ್ಷದ ಸಂಪರ್ಕ ಸೇತುವೆಯಾಗಬೇಕು. ಪ್ರತಿ ಪಂಚಾಯಿತಿಯಲ್ಲಿ ಆರು ಸದಸ್ಯರ ಗ್ಯಾರಂಟಿ ಸಮಿತಿ ರಚಿಸುವಂತೆ ಸೂಚನೆ ನೀಡಿದ್ದು, ನಾಲ್ಕೈದು ದಿನಗಳಲ್ಲಿ ಪ್ರಕ್ರಿಯೆ ಪೂರ್ಣಗೊಳಿಸಬೇಕು. ಸಮಿತಿ ಸದಸ್ಯರು ಫಲಾನುಭವಿಗಳನ್ನು ಸಂಪರ್ಕಿಸಿ ಸರ್ಕಾರದ ಯೋಜನೆಗಳ ಮಾಹಿತಿ ತಲುಪಿಸುವುದರೊಂದಿಗೆ ಪಕ್ಷ ಸಂಘಟನೆಗೂ ನೆರವಾಗಬೇಕು ಎಂದು ತಿಳಿಸಿದರು.

ಯುವಕರಲ್ಲಿ ನಾಯಕತ್ವ ಗುಣ ಬೆಳೆಸುವ ಉದ್ದೇಶದಿಂದ ಭಾರತ್ ಜೋಡೋ ಯುವ ಸಂಘಗಳನ್ನು ರಚಿಸಲಾಗುತ್ತಿದೆ. ಪ್ರತಿ ಪಂಚಾಯಿತಿಯಲ್ಲಿ ಕನಿಷ್ಠ 250 ಸದಸ್ಯರನ್ನು ನೋಂದಾಯಿಸುವ ಗುರಿ ಹೊಂದಲಾಗಿದೆ. ಯುವಕರ ಆಸಕ್ತಿ ಮತ್ತು ಪ್ರತಿಭೆಗೆ ಅನುಗುಣವಾಗಿ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳಿಗೆ ಅವಕಾಶ ಕಲ್ಪಿಸಲಾಗುವುದು. ಪ್ರತಿ 15 ದಿನಗಳಿಗೊಮ್ಮೆ ಸಭೆ ನಡೆಸುವಂತೆಯೂ ಸೂಚಿಸಲಾಗಿದೆ ಎಂದರು.

ಮಂಡ್ಯ ಜಿಲ್ಲೆಯ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲೂ ಇಂದಿರಾ ಭವನ ನಿರ್ಮಾಣವಾಗಬೇಕು. ಮಳವಳ್ಳಿ, ಮದ್ದೂರು, ಶ್ರೀರಂಗಪಟ್ಟಣ ಹಾಗೂ ನಾಗಮಂಗಲದಲ್ಲಿ ಈ ನಿಟ್ಟಿನಲ್ಲಿ ಪ್ರಯತ್ನಗಳು ನಡೆಯುತ್ತಿವೆ. ಉಳಿದ ಕ್ಷೇತ್ರಗಳಲ್ಲೂ ಪಕ್ಷದ ಕಚೇರಿಗಳನ್ನು ನಿರ್ಮಿಸಿ ಕಾರ್ಯಕರ್ತರಿಗೆ ಒಗ್ಗೂಡುವ ಕೇಂದ್ರ ಕಲ್ಪಿಸಲಾಗುವುದು ಎಂದು ಹೇಳಿದರು.

ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ನೀರಾವರಿ ಸೇರಿದಂತೆ ವಿವಿಧ ಯೋಜನೆಗಳಿಗಾಗಿ ಈಗಾಗಲೇ 2 ಸಾವಿರ ಕೋಟಿಗೂ ಅಧಿಕ ಅನುದಾನ ಮಂಜೂರು ಮಾಡಲಾಗಿದೆ. ರೈತರ ಹೊಲಗಳಿಗೆ ನೀರು ತಲುಪಿಸುವುದು ಸರ್ಕಾರದ ಆದ್ಯತೆಯಾಗಿದೆ ಎಂದರು.

ಮೇಕೆದಾಟು ಯೋಜನೆಗೆ 2,500 ಎಕರೆ ಗುರುತು

ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ ಈಗಾಗಲೇ 2,500 ಎಕರೆ ಜಮೀನು ಗುರುತಿಸಲಾಗಿದೆ. ಇದರಲ್ಲಿ ರೈತರ ಖಾಸಗಿ ಜಮೀನು ಕೇವಲ 500 ಎಕರೆ ಮಾತ್ರ ಭೂಸ್ವಾಧೀನವಾಗಲಿದೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

ಮಂಡ್ಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯೋಜನೆಗೆ 66 ಟಿಎಂಸಿ ನೀರು ಸಂಗ್ರಹಿಸುವ ಸಾಮರ್ಥ್ಯವಿರಲಿದೆ. ಕಾವೇರಿ ನೀರಿನ ಹಂಚಿಕೆ ಹಾಗೂ ಸಂಕಷ್ಟದ ಸಂದರ್ಭಗಳಲ್ಲಿ ನೀರಿನ ನಿರ್ವಹಣೆಗೆ ಯೋಜನೆ ನೆರವಾಗಲಿದೆ. ಅರಣ್ಯ ಭೂಮಿಗೆ ಪರ್ಯಾಯವಾಗಿ ಜಮೀನು ಗುರುತಿಸುವ ಪ್ರಕ್ರಿಯೆ ನಡೆಯುತ್ತಿದ್ದು, ಕೇಂದ್ರ ಸರ್ಕಾರದಿಂದ ಅರಣ್ಯ ಅನುಮತಿ ದೊರೆತ ಬಳಿಕ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಲಾಗುವುದು. ಮುಂದಿನ ಬಜೆಟ್ ವೇಳೆಗೆ ಅನುಮತಿ ಪಡೆಯುವ ನಿರೀಕ್ಷೆಯಿದೆ ಎಂದರು.

ಮೇಕೆದಾಟು ಯೋಜನೆಗೆ ರಾಜಕೀಯ ಬದಿಗಿಟ್ಟು ಬಿಜೆಪಿ ನಾಯಕರು ಸಹಕಾರ ನೀಡಬೇಕು. ಎಲ್ಲರೂ ಒಟ್ಟಾಗಿ ಕೇಂದ್ರದ ಅನುಮತಿ ಪಡೆಯಲು ಪ್ರಯತ್ನಿಸೋಣ ಎಂದು ಮನವಿ ಮಾಡಿದರು.

ವಿಮಾನ ಎಂಜಿನ್ ದುರಸ್ತಿ ಘಟಕಕ್ಕೆ ಜಮೀನು ನೀಡಲು ಸಿದ್ಧ: ವಿಮಾನ ಎಂಜಿನ್ ದುರಸ್ತಿ ಘಟಕ ಸ್ಥಾಪನೆಗೆ ರಾಜ್ಯ ಸರ್ಕಾರ ಜಮೀನು ನೀಡುತ್ತಿಲ್ಲ ಎಂಬ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಡಿ.ಕೆ. ಶಿವಕುಮಾರ್, ಆರಂಭದಲ್ಲಿ 100 ಎಕರೆ ಜಮೀನು ನೀಡಲು ಒಪ್ಪಿಗೆ ಸೂಚಿಸಲಾಗಿತ್ತು. ಇದೀಗ 500 ಎಕರೆ ಬೇಕೆಂದು ಕೇಳಿದ್ದಾರೆ. ಅಗತ್ಯವಿರುವಷ್ಟು ಜಮೀನು ನೀಡಲು ಸರ್ಕಾರ ಸಿದ್ಧವಿದೆ ಎಂದರು.

ಯಾವ ಜಮೀನು ಬೇಕು ಎಂಬುದನ್ನು ಕೇಂದ್ರದವರು ಗುರುತಿಸಿ ತಿಳಿಸಿದರೆ ಅದನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಆದರೆ, ಭೂಸ್ವಾಧೀನ ಸಂದರ್ಭದಲ್ಲಿ ರೈತರ ವಿರೋಧ ವ್ಯಕ್ತವಾಗುವ ಸಾಧ್ಯತೆಯನ್ನೂ ಗಮನದಲ್ಲಿಟ್ಟುಕೊಳ್ಳಬೇಕಿದೆ ಎಂದು ಹೇಳಿದರು.

ಕನ್ನಡಪರ ಸಂಘಟನೆಗಳು ಒಂದಾಗಿ, ನಾಡಿನ ಹಿತ ಕಾಪಾಡಿ

● ವಿಕ್ರಮ ವಾಹಿನಿ । ಬೆಂಗಳೂರು

ಕನ್ನಡಪರ ಸಂಘಟನೆಗಳು ಹಾಗೂ ಹೋರಾಟಗಾರರು ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ನಾಡಿನ ಹಿತಕ್ಕಾಗಿ ಒಂದೇ ವೇದಿಕೆಯಡಿ ಒಗ್ಗೂಡಬೇಕು. ಎಲ್ಲರ ದನಿಯೂ ಒಂದಾಗಿರಬೇಕು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಕರೆ ನೀಡಿದ್ದಾರೆ.

ಭಾನುವಾರ ಬೆಂಗಳೂರಿನಲ್ಲಿ ನಡೆಯಲಿರುವ 'ಎಚ್‌ಎಂಟಿ ಕನ್ನಡಿಗ' ಕೈಗಡಿಯಾರಗಳ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಕನ್ನಡಪರ ಸಂಘಟನೆಗಳ ಮುಖಂಡರನ್ನು ಆಹ್ವಾನಿಸುವ ಉದ್ದೇಶದಿಂದ ಅವರು ಶನಿವಾರ ನವದೆಹಲಿಯ ತಮ್ಮ ಸಚಿವಾಲಯದ ಕಚೇರಿಯಿಂದ ಆನ್‌ಲೈನ್ ಸಭೆ ನಡೆಸಿದರು. ಸಭೆಯಲ್ಲಿ ಸುಮಾರು 25 ಕನ್ನಡಪರ ಸಂಘಟನೆಗಳ ರಾಜ್ಯಾಧ್ಯಕ್ಷರು ಹಾಗೂ ಪದಾಧಿಕಾರಿಗಳು ಭಾಗವಹಿಸಿದ್ದರು.

ಕನ್ನಡಪರ ಸಂಘಟನೆಗಳು ಹರಿದು ಹಂಚಿಹೋಗದೆ ಒಗ್ಗಟ್ಟಿನ ಶಕ್ತಿಯಾಗಿ ಹೊರಹೊಮ್ಮಬೇಕು. ಕರ್ನಾಟಕ ಸಮೃದ್ಧ ರಾಜ್ಯವಾಗಿದ್ದರೂ ಇಲ್ಲಿನ ತೆರಿಗೆ ಹಣ ಹಾಗೂ ಸಂಪನ್ಮೂಲಗಳು ದುರುಪಯೋಗವಾಗುತ್ತಿವೆ. ಇದನ್ನು ತಡೆಯಲು ಎಲ್ಲರೂ ಒಟ್ಟಾಗಿ ಧ್ವನಿ ಎತ್ತಬೇಕು. ಕನ್ನಡದ ರಕ್ಷಣೆ ಮತ್ತು ನಾಡಿನ ಸ್ವಾಭಿಮಾನ ಉಳಿಸುವಲ್ಲಿ ಹೋರಾಟಗಾರರ ಪಾತ್ರ ಮಹತ್ವದ್ದಾಗಿದೆ ಎಂದು ಹೇಳಿದರು.

ಕನ್ನಡಪರ ಹೋರಾಟಗಾರರು ತಮ್ಮ ನೋವು ಹಾಗೂ ಸಮಸ್ಯೆಗಳ ಬಗ್ಗೆ ಆತಂಕಪಡಬೇಕಿಲ್ಲ. ಅವರೊಂದಿಗೆ ತಾನಿದ್ದು, ತಮ್ಮ ಇತಿಮಿತಿಯಲ್ಲಿ ಕನ್ನಡ ನಾಡಿನ ಹಿತಕ್ಕಾಗಿ ಕೆಲಸ ಮಾಡುತ್ತಿರುವುದಾಗಿ ಭರವಸೆ ನೀಡಿದರು. ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಎಲ್ಲರೂ ಒಗ್ಗಟ್ಟಿನ ಸಂಕಲ್ಪ ಮಾಡಬೇಕು ಎಂದು ಮನವಿ ಮಾಡಿದರು.

ಒಂದು ಕಾಲದಲ್ಲಿ ಉತ್ತಮ ಸ್ಥಿತಿಯಲ್ಲಿದ್ದ ಎಚ್‌ಎಂಟಿ ಕಾರ್ಖಾನೆಗೆ ಮತ್ತೆ ವೈಭವ ತಂದುಕೊಡುವ ಪ್ರಯತ್ನ ನಡೆಯುತ್ತಿದೆ. ಇದರ ಭಾಗವಾಗಿ ತಮ್ಮ ಇಲಾಖೆಯ ವತಿಯಿಂದ 'ಎಚ್‌ಎಂಟಿ ಕನ್ನಡಿಗ' ಕೈಗಡಿಯಾರಗಳನ್ನು ರೂಪಿಸಲಾಗಿದ್ದು, ಭಾನುವಾರ ನಡೆಯುವ ಕಾರ್ಯಕ್ರಮದಲ್ಲಿ ಅವುಗಳನ್ನು ಲೋಕಾರ್ಪಣೆ ಮಾಡಲಾಗುವುದು.

ಕನ್ನಡಪರ ಸಂಘಟನೆಗಳ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಕುಮಾರಸ್ವಾಮಿ ಆಹ್ವಾನಿಸಿದರು.

ಒಡೆಯರ್ ಕುಟುಂಬದ ವಿರುದ್ಧ ಯತೀಂದ್ರ ಹೇಳಿಕೆಗೆ ರವಿಕುಮಾರ್ ಖಂಡನೆ

● ವಿಕ್ರಮ ವಾಹಿನಿ । ಬೆಂಗಳೂರು

ಮೈಸೂರು ಒಡೆಯರ್ ಕುಟುಂಬದ ವಿರುದ್ಧ ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರು ನೀಡುತ್ತಿರುವ ಹೇಳಿಕೆಗಳು ಹಾಗೂ ಅಪಪ್ರಚಾರದ ಧಾಟಿ ಖಂಡನೀಯ ಎಂದು ವಿಧಾನಪರಿಷತ್ತಿನ ಪ್ರತಿಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಟೀಕಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರ ವಿರುದ್ಧ ಯತೀಂದ್ರ ಬಳಸುತ್ತಿರುವ ಪದಪ್ರಯೋಗ ಮತ್ತು ಭಾಷೆ ಸ್ವೀಕಾರಾರ್ಹವಲ್ಲ. ಮೈಸೂರು ರಾಜಮನೆತನದ ವಿರುದ್ಧ ಅರ್ಥಹೀನ ಹೇಳಿಕೆಗಳನ್ನು ನೀಡುವ ಮೂಲಕ ಜನರ ಭಾವನೆಗಳಿಗೆ ಧಕ್ಕೆ ತರುತ್ತಿದ್ದಾರೆ. ಒಡೆಯರ್ ಕುಟುಂಬಕ್ಕೆ ಅವಮಾನ ಮಾಡುವುದನ್ನು ರಾಜ್ಯದ ಜನತೆ ಸಹಿಸುವುದಿಲ್ಲ ಎಂದು ಎಚ್ಚರಿಸಿದ್ದಾರೆ.

ಮೈಸೂರು ಸಂಸ್ಥಾನದ ಅಭಿವೃದ್ಧಿ ಹಾಗೂ ರಾಜ್ಯದ ಪ್ರಗತಿಗೆ ಒಡೆಯರ್ ಕುಟುಂಬದ ಕೊಡುಗೆ ಅಪಾರವಾಗಿದೆ. ಮೈಸೂರು ಸಿಲ್ಕ್, ಮೈಸೂರು ಸ್ಯಾಂಡಲ್, ಮೈಸೂರು ಮೃಗಾಲಯ, ಕೆಆರ್‌ಎಸ್ ಅಣೆಕಟ್ಟು, ಶಿಕ್ಷಣ ಸಂಸ್ಥೆಗಳು, ನೀರಾವರಿ ವ್ಯವಸ್ಥೆ ಸೇರಿದಂತೆ ಹಲವು ಅಭಿವೃದ್ಧಿ ಕಾರ್ಯಗಳು ರಾಜಮನೆತನದ ಕೊಡುಗೆಗಳಾಗಿವೆ.

ಒಡೆಯರ್ ಕುಟುಂಬದ ಆಸ್ತಿಗಳಿಗೆ ಸಂಬಂಧಿಸಿದ ಹಲವು ಪ್ರಕರಣಗಳು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಯ ಹಂತದಲ್ಲಿವೆ. ಇಂತಹ ಸಂದರ್ಭದಲ್ಲಿ ರಾಜಮಾತೆ ಪ್ರಮೋದಾದೇವಿ ಒಡೆಯರ್ ಅವರ ಕುರಿತು ಮಾತನಾಡುವಾಗ ಯತೀಂದ್ರ ಸಂಯಮ ಮತ್ತು ಜವಾಬ್ದಾರಿ ಪ್ರದರ್ಶಿಸಬೇಕು ಎಂದು ಆಗ್ರಹಿಸಿದ್ದಾರೆ.

ಮೈಸೂರು ದಸರಾ ಸಂದರ್ಭದಲ್ಲಿ ಚಿನ್ನದ ಅಂಬಾರಿ ಪಡೆಯಲು ರಾಜ್ಯ ಸರ್ಕಾರ ಠೇವಣಿ ಪಾವತಿಸುತ್ತದೆ ಎಂಬ ಯತೀಂದ್ರ ಅವರ ಹೇಳಿಕೆಗೂ ಆಕ್ಷೇಪ ವ್ಯಕ್ತಪಡಿಸಿರುವ ಅವರು, ಇದು ಸರ್ಕಾರದ ಕರ್ತವ್ಯವೇ ಹೊರತು ದೊಡ್ಡ ಉಪಕಾರವಲ್ಲ. ಈ ವಿಚಾರದಲ್ಲಿ ಯತೀಂದ್ರ ನೀಡಿರುವ ಹೇಳಿಕೆ ಅವರ ಮನಸ್ಥಿತಿಯನ್ನು ತೋರಿಸುತ್ತದೆ ಎಂದು ಟೀಕಿಸಿದ್ದಾರೆ. ಮೈಸೂರು ಒಡೆಯರ್ ಕುಟುಂಬದ ಗೌರವ, ಘನತೆ ಮತ್ತು ಸ್ವಾಭಿಮಾನವನ್ನು ರಕ್ಷಿಸಲು ಬಿಜೆಪಿ ಬದ್ಧವಾಗಿದ್ದು, ರಾಜಮನೆತನದ ಪರವಾಗಿ ಪಕ್ಷ ದೃಢವಾಗಿ ನಿಲ್ಲಲಿದೆ ಎಂದು ರವಿಕುಮಾರ್ ತಿಳಿಸಿದ್ದಾರೆ.

'ಕೃಪಾ ಆಳ್ವ ನೋಟಿಸ್ ಉತ್ತರಿಸದ ಕಾರಣ ಪಕ್ಷದಿಂದ ಅಮಾನತು'

● ವಿಕ್ರಮ ವಾಹಿನಿ । ಬೆಂಗಳೂರು

"ಸಾರ್ವಜನಿಕ ಕ್ಷೇತ್ರದಲ್ಲಿ ನಾಯಕರಿಗೆ ಮುಜುಗರ ಉಂಟುಮಾಡುವ ಕೆಲಸದಿಂದ ಮಾಧ್ಯಮಗಳಲ್ಲಿ ಅಹಿತಕರ ಸುದ್ದಿಗಳು ಬಂದಿದ್ದವು. ಈ ವಿಚಾರವಾಗಿ ಕಾರಣ ಕೇಳಿ ಕೃಪಾ ಆಳ್ವ ಅವರಿಗೆ ನೋಟೀಸ್ ನೀಡಿ ಉತ್ತರ ನೀಡಲು ಮೂರು ದಿನಗಳ ಕಾಲಾವಕಾಶ ನೀಡಲಾಗಿತ್ತು. ಅವರಿಂದ ಉತ್ತರ ಬಾರದ ಕಾರಣ ಅವರನ್ನು ಪಕ್ಷದಿಂದ ಆರು ವರ್ಷಗಳ ಕಾಲ ಉಚ್ಛಾಟನೆ ಮಾಡಲಾಗಿದೆ" ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೋಟೀಸ್ ಅವರಿಗೆ ತಲುಪಿಲ್ಲವೇ ಎಂದು ಕೇಳಿದಾಗ, "ಅವರಿಗೆ ಕಳುಹಿಸಿದ ನೋಟೀಸ್ ವಾಪಸ್ ಬಂದಿದೆ. ಹೀಗಾಗಿ ಬೇರೆ ವಿಧಿ ಇಲ್ಲದೆ ಈ ಕ್ರಮ ಕೈಗೊಳ್ಳಲಾಗಿದೆ. ಕೃಪ ಆಳ್ವಾ ಅವರು ವಿದೇಶಕ್ಕೆ ಹೋಗಿರುವ ವಿಚಾರವನ್ನು ಮಹಾಮಾನವನ ಐಬಿ, ಸಿಬಿಐ ನೋಡಿಕೊಳ್ಳುತ್ತದೆ. ನಾನು ಅದರ ಬಗ್ಗೆ ನೋಡುವುದಿಲ್ಲ" ಎಂದರು.

ಇಷ್ಟು ತಡವಾಗಿ ಕ್ರಮ ಯಾಕೆ ಎಂಬ ಬಗ್ಗೆ ಕೇಳಿದಾಗ, "ನಾವು ದುಡುಕಿ ಹೆಜ್ಜೆ ಇಡುವ ಮುನ್ನ, ಅವರನ್ನು ಕೇಳಿ ಕ್ರಮ ಕೈಗೊಳ್ಳಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರಿಗೂ ಒಂದು ಅವಕಾಶ ನೀಡಬೇಕು. ಅವರು ಉತ್ತರ ನೀಡದೇ ಇದ್ದಾಗ ತೀರ್ಮಾನ ಕೈಗೊಂಡಿದ್ದೇವೆ" ಎಂದರು.

ಕೃಪ ಆಳ್ವಾ ಅವರ ಹಿಂದೆ ಬೇರೆ ಯಾರಾದರೂ ಇದ್ದಾರ ಎಂಬ ವಿಚಾರವಾಗಿ ಪಕ್ಷದಲ್ಲಿ ಆಂತರಿಕ ತನಿಖೆ ಮಾಡಿಸುತ್ತೀರಾ ಎಂದು ಕೇಳಿದಾಗ, "ಈ ವಿಚಾರವನ್ನು ಮಹಾಮಾನವನಿಗೆ ಬಿಟ್ಟಿದ್ದೇವೆ. ಕೃಪ ಆಳ್ವಾ ಅವರ ವಿರುದ್ಧ ನೇರ ಸಾಕ್ಷಿ ಇರುವ ಕಾರಣ ಉಚ್ಛಾಟಿಸಿದ್ದೇವೆ" ಎಂದರು.

ನಾಗ್ಪುರದಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿರುವ ಬಗ್ಗೆ ಕೇಳಿದಾಗ, "ನಾಗ್ಪುರ ಎಂದರೆ ಕನ್ನಡದಲ್ಲಿ ಹಾವಿನಪುರ. ದೇಶದಲ್ಲಿ ದ್ವೇಷದ ವಿಷ ಕಾರುವ ಸಂಘಟನೆ ಕತ್ತಿಗೆ ಕೈ ಹಾಕಿ ಹಿಡಿದಿದ್ದೇವೆ. ಅಲ್ಲಿ ಆರಂಭವಾಗಿದ್ದು, ದೇಶದಲ್ಲಿ ಅವರನ್ನು ಮಣಿಸುವ ಸಂದೇಶ ರವಾನಿಸುತ್ತೇವೆ" ಎಂದರು.

"ಕಾಂಗ್ರೆಸ್ ಸೋಲಿಸಿದ್ದೇವೆ ಎಂದು ಹೇಳಿಕೊಂಡು ಹೋದರೆ ಆಗುವುದಿಲ್ಲ. ಮಹಾಮಾನವನ ಕ್ಷೇತ್ರ ವಾರಣಾಸಿಯಲ್ಲಿ ಬಹಳ ಕೆಟ್ಟದಾಗಿ ಸೋತಿದ್ದಾರೆ. ಬಿಜೆಪಿ ಅಧ್ಯಕ್ಷನ ಕ್ಷೇತ್ರ ಬಿಹಾರದಲ್ಲಿ, ನಿತೀನ್ ಗಡ್ಕರಿ ಅವರ ಕ್ಷೇತ್ರದಲ್ಲಿ, ಯೋಗಿ ಆದಿತ್ಯನಾಥ್ ಕ್ಷೇತ್ರದಲ್ಲಿ ಸೋತಿದ್ದಾರೆ" ಎಂದು ತಿಳಿಸಿದರು.

ದೇವೇಗೌಡರನ್ನು ಯಡಿಯೂರಪ್ಪ ಅವರು ಭೇಟಿ ಮಾಡಿದ್ದು, ಆನೆ ನಡೆಯುವಾಗ ಏನಾದರೂ ಬೀಳಬಹುದು ಎಂದು ಅದರ ಹಿಂದೆ ತೋಳ ಮತ್ತು ನರಿ ನಡೆದುಕೊಂಡು ಹೋಗುತ್ತಿರುತ್ತದೆ. ಅದರಲ್ಲಿ ತಪ್ಪೇನಿಲ್ಲ ಎಂದು ತಿರುಗೇಟು ನೀಡಿದರು.

ದೆಹಲಿ ಪ್ರತಿಭಟನೆ ಬಗ್ಗೆ ಕೇಳಿದಾಗ, "ನಮ್ಮ ನಾಯಕರಾದ ರಾಹುಲ್ ಗಾಂಧಿ ಅವರು ಪ್ರಜಾಪ್ರಭುತ್ವ ಹಾಗೂ ಸಂವಿಧಾನ ಉಳಿಸಲು ಹೋರಾಟಕ್ಕೆ ಕರೆ ನೀಡಿದ್ದಾರೆ. ಕರ್ನಾಟಕದಿಂದ ಹೋಗಲು ರೈಲ್ವೇಗೆ ಅನುಮತಿ ನೀಡಿರಲಿಲ್ಲ. ಆಮೂಲಕ ನಾವು ಭಾಗವಹಿಸಲು ತೊಂದರೆ ನೀಡಿದ್ದಾರೆ. ನಮ್ಮ ಕಾರ್ಯಕರ್ತರು ಈಗಾಗಲೇ ಸಹಸ್ರಾರು ಸಂಖ್ಯೆಯಲ್ಲಿ ದೆಹಲಿ ತಲುಪಿದ್ದು, ರಾಮಲೀಲಾ ಮೈದಾನದಲ್ಲಿ ಪ್ರಜಾಪ್ರಭುತ್ವ ಹಾಗೂ ಸಂವಿಧಾನ ರಕ್ಷಣೆಗಾಗಿ ದೊಡ್ಡ ಹೋರಾಟ ನಡೆಯಲಿದೆ" ಎಂದು ತಿಳಿಸಿದರು.

ಗೋವುಗಳ ರಕ್ಷಣೆಗಾಗಿ ಹಾಲಿನ ದರ ಏರಿಕೆ ಅನಿವಾರ್ಯ: ಸಿಎಂ

● ವಿಕ್ರಮ ವಾಹಿನಿ । ಬೆಂಗಳೂರು

ಬರಗಾಲದ ಪರಿಣಾಮ ಹಾಲಿನ ಉತ್ಪಾದನೆ ಕಡಿಮೆಯಾಗುತ್ತಿದೆ. ಗೋವುಗಳನ್ನು ರಕ್ಷಿಸಿ, ರೈತರ ಹಿತ ಕಾಪಾಡಬೇಕಾದರೆ ಹಾಲಿನ ದರ ಹೆಚ್ಚಳ ಅನಿವಾರ್ಯವಾಗಿತ್ತು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.

ಸದಾಶಿವನಗರದ ತಮ್ಮ ನಿವಾಸದ ಬಳಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗೋವುಗಳಿಗೆ ಮೇವು ಮತ್ತು ಆಹಾರ ಒದಗಿಸಬೇಕಾದರೆ ರೈತರು ಆರ್ಥಿಕವಾಗಿ ಸದೃಢವಾಗಿರಬೇಕು. ರೈತರ ಬಳಿ ಹಣವಿಲ್ಲದಿದ್ದರೆ ಹಸುಗಳ ನಿರ್ವಹಣೆ ಕಷ್ಟವಾಗುತ್ತದೆ. ಗೋಮಾತೆಗೆ ಗೌರವ ನೀಡುವುದರ ಜೊತೆಗೆ ಬರಗಾಲದ ಸಂದರ್ಭದಲ್ಲಿ ಅವುಗಳನ್ನು ಉಳಿಸುವ ಕೆಲಸ ಮಾಡಬೇಕು ಎಂದರು.

ಹಾಲು ಒಕ್ಕೂಟಗಳು ಲೀಟರ್‌ಗೆ ರೂ 12 ಹೆಚ್ಚಳ ಮಾಡುವಂತೆ ಮನವಿ ಮಾಡಿದ್ದವು. ನೆರೆಯ ರಾಜ್ಯಗಳಲ್ಲಿ ಹಾಲಿನ ದರ ಹೆಚ್ಚಿರುವುದರಿಂದ ಕರ್ನಾಟಕದ ರೈತರು ಹಾಲನ್ನು ಅಲ್ಲಿಗೆ ಸಾಗಿಸುವ ಪರಿಸ್ಥಿತಿಯೂ ಇತ್ತು. ಈ ಹಿನ್ನೆಲೆಯಲ್ಲಿ ದರ ಏರಿಕೆ ಮಾಡಲಾಗಿದೆ. ಹಲವು ವರ್ಷಗಳಿಂದ ಹಾಲಿನ ದರ ಹೆಚ್ಚಿಸಿರಲಿಲ್ಲ. ಮೊಸರಿನ ದರವನ್ನು ಕೊಬ್ಬಿನ ಅಂಶದ ಆಧಾರದ ಮೇಲೆ ನಿಗದಿಪಡಿಸುವ ನಿರ್ಧಾರವನ್ನು ಒಕ್ಕೂಟಗಳಿಗೆ ಬಿಡಲಾಗಿದೆ ಎಂದು ತಿಳಿಸಿದರು.

ಸಕ್ಕರೆ ಬೆಲೆ ಕೆಜಿಗೆ ರೂ 50 ಆಗಲಿ: ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರು ನಡೆಸುತ್ತಿರುವ ಹೋರಾಟದ ಕುರಿತು ಪ್ರತಿಕ್ರಿಯಿಸಿದ ಅವರು, ರೈತ ಮುಖಂಡರು, ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳು ಹಾಗೂ ಕೇಂದ್ರ ಸರ್ಕಾರದೊಂದಿಗೆ ಈ ಬಗ್ಗೆ ಮಾತುಕತೆ ನಡೆದಿದೆ. ಕೇಂದ್ರ ಸರ್ಕಾರ ನಿಗದಿಪಡಿಸುವ ದರವನ್ನು ರೈತರಿಗೆ ವರ್ಗಾಯಿಸುವಂತೆ ಕಾರ್ಖಾನೆಗಳಿಗೂ ಸೂಚಿಸಲಾಗಿದೆ.



ಕಳೆದ ಎಂಟು ವರ್ಷಗಳಿಂದ ಸಕ್ಕರೆಯ ಬೆಲೆಯಲ್ಲಿ ಹೆಚ್ಚಳವಾಗಿಲ್ಲ. ಸಕ್ಕರೆ ಬೆಲೆ ಹೆಚ್ಚಿಸಿದರೆ ಮಾತ್ರ ರೈತರಿಗೆ ಕಬ್ಬಿಗೆ ಉತ್ತಮ ಬೆಲೆ ನೀಡಲು ಸಾಧ್ಯ. ರೈತರ ಬದುಕುಳಿಸುವ ದೃಷ್ಟಿಯಿಂದ ಬೆಲೆ ಪರಿಷ್ಕರಣೆ ಅಗತ್ಯವಾಗಿದೆ. ಈ ಕುರಿತು ಪ್ರಧಾನಿ ಅವರಿಗೆ ಪತ್ರ ಬರೆದಿದ್ದು, ಮುಂದಿನ ದಿನಗಳಲ್ಲಿ ಕೇಂದ್ರ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದು. ರೈತರ ಹಿತದೃಷ್ಟಿಯಿಂದ ತಾನು ಅವರ ಪರವಾಗಿರುವುದಾಗಿ ಹೇಳಿದರು. ಕಬ್ಬು ಅರೆಯುವಿಕೆ ಆರಂಭಿಸುವ ಕುರಿತು ಮಾತನಾಡಿದ ಅವರು, ಸೆಪ್ಟೆಂಬರ್‌ನಲ್ಲೇ ಕಬ್ಬು ಅರೆಯುವಂತೆ ಕೇಂದ್ರ ಸರ್ಕಾರ ಸೂಚಿಸಿತ್ತು. ಆದರೆ ಕಬ್ಬಿನಲ್ಲಿ ರಸಾಂಶ ಕಡಿಮೆಯಿರುವುದರಿಂದ ರೈತರಿಗೆ ನಷ್ಟವಾಗುವ ಆತಂಕವಿದೆ. ಕಾರ್ಖಾನೆಗಳು ಕಾರ್ಮಿಕರಿಗೆ ವೇತನ ನೀಡಬೇಕು, ರೈತರಿಗೂ ತೊಂದರೆಯಾಗಬಾರದು. ಕೇಂದ್ರದ ನಿರ್ಧಾರದಂತೆ ಕಾರ್ಖಾನೆಗಳಿಂದ ರೈತರಿಗೆ ಸೂಕ್ತ ದರ ಕೊಡಿಸುವ ಜವಾಬ್ದಾರಿಯನ್ನು ರಾಜ್ಯ ಸರ್ಕಾರ ವಹಿಸಿಕೊಳ್ಳಲಿದೆ.

ಉತ್ತರಾಖಂಡ ದುರಂತಕ್ಕೆ ಸಂತಾಪ

ಉತ್ತರಾಖಂಡದಲ್ಲಿ ಹೆಲಿಕಾಪ್ಟರ್ ಅಪಘಾತದಲ್ಲಿ ಕನ್ನಡಿಗರು ಮೃತಪಟ್ಟಿರುವುದು ತೀವ್ರ ದುಃಖ ತಂದಿದೆ. ದೇವರ ದರ್ಶನಕ್ಕೆ ತೆರಳಿದ ಸಂದರ್ಭದಲ್ಲಿ ಇಂತಹ ದುರಂತ ಸಂಭವಿಸಿರುವುದು ದುರದೃಷ್ಟಕರ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ. ಮೃತದೇಹಗಳನ್ನು ರಾಜ್ಯಕ್ಕೆ ತರಲು ಅಗತ್ಯ ವ್ಯವಸ್ಥೆ ಮಾಡಲಾಗಿದೆ. ಈ ಕುರಿತು ಸಂಬಂಧಪಟ್ಟ ಸರ್ಕಾರ ಹಾಗೂ ದೆಹಲಿಯ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದು, ತಾನೂ ಮಾಹಿತಿ ನೀಡಿದ್ದೇನೆ. ಪ್ರವಾಸಿಗರು ಇಂತಹ ಪ್ರದೇಶಗಳಿಗೆ ತೆರಳುವಾಗ ಎಚ್ಚರಿಕೆ ವಹಿಸಬೇಕು ಎಂದು ಹೇಳಿದರು.

— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —

ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಕಟಣೆಗಳಿಗೆ ನವೆಂಬರ್ ಪೂರ್ತಿ ಶೇ.50 ರಿಯಾಯಿತಿ

● ವಿಕ್ರಮ ವಾಹಿನಿ । ಬೆಂಗಳೂರು

ಕನ್ನಡ ರಾಜ್ಯೋತ್ಸವದ ಅಂಗವಾಗಿ ಕನ್ನಡ ಪುಸ್ತಕ ಪ್ರಾಧಿಕಾರವು ತನ್ನ ಎಲ್ಲ ಪ್ರಕಟಣೆಗಳನ್ನು ನವೆಂಬರ್ ತಿಂಗಳ ಪೂರ್ತಿ ಶೇ.50ರ ರಿಯಾಯಿತಿ ದರದಲ್ಲಿ ಮಾರಾಟ ಮಾಡಲು ನಿರ್ಧರಿಸಿದೆ. ಪುಸ್ತಕ ಪ್ರಿಯರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಪ್ರಾಧಿಕಾರ ಮನವಿ ಮಾಡಿದೆ.

ಬೆಂಗಳೂರಿನ ಕನ್ನಡ ಭವನದಲ್ಲಿರುವ ಸಿರಿಗನ್ನಡ ಪುಸ್ತಕ ಮಳಿಗೆ, ಎಲ್ಲ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗಳು ಹಾಗೂ ಕನ್ನಡ ಪುಸ್ತಕ ಪ್ರಾಧಿಕಾರದಿಂದ ಆರಂಭಿಸಿರುವ ಸಿರಿಗನ್ನಡ ಪುಸ್ತಕ ಮಾರಾಟ ಮಳಿಗೆಗಳಲ್ಲಿ ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದು. ಅಲ್ಲದೆ, ಪ್ರಾಧಿಕಾರದ ಅಧಿಕೃತ ಜಾಲತಾಣ ɿಣಣಠಿ:// ಇಠಿಠಿ.ಇಚಿಡಿಟಿಚಿಣಚಿಞಚಿ.ಲಠಿ.ಎಟಿ ಮೂಲಕವೂ ಆನ್‌ಲೈನ್‌ನಲ್ಲಿ ಪುಸ್ತಕ ಖರೀದಿಗೆ ಶೇ.50ರ ರಿಯಾಯಿತಿ ಲಭ್ಯವಿದೆ.

ಕನ್ನಡ ಸಾಹಿತ್ಯದ ವಿವಿಧ ಪ್ರಕಾರಗಳಿಗೆ ಸಂಬಂಧಿಸಿದ ವ್ಯಕ್ತಿಚಿತ್ರಗಳು, ನಾಟಕಗಳು, ಅಲೆಮಾರಿ ಸಮುದಾಯ, ವೈದ್ಯಕೀಯ, ಪ್ರಾಚೀನ ಕನ್ನಡ ಸಾಹಿತ್ಯ, ಜಾನಪದ, ಪರಿಸರ ಮತ್ತು ಕೃಷಿ ಸೇರಿದಂತೆ ಹಲವು ವಿಷಯಗಳ ಮೌಲಿಕ ಕೃತಿಗಳನ್ನು ಪ್ರಾಧಿಕಾರ ಪ್ರಕಟಿಸಿದೆ. ವಿದ್ವಾಂಸರು ಹಾಗೂ ಪ್ರಾಜ್ಞರು ರಚಿಸಿರುವ ಈ ಕೃತಿಗಳನ್ನು ಜನಸಾಮಾನ್ಯರಿಗೆ ಕೈಗೆಟುಕುವ ಬೆಲೆಯಲ್ಲಿ ತಲುಪಿಸುವ ಉದ್ದೇಶದಿಂದ ರಿಯಾಯಿತಿ ಮಾರಾಟ ಹಮ್ಮಿಕೊಳ್ಳಲಾಗಿದೆ ಎಂದು ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗೆ ಬೆಂಗಳೂರಿನ ಕನ್ನಡ ಭವನದ ಸಿರಿಗನ್ನಡ ಪುಸ್ತಕ ಮಳಿಗೆಯನ್ನು 080–22107705 ಸಂಪರ್ಕಿಸಬಹುದು.

ರೈತರಿಗೆ ನ್ಯಾಯಯುತ ಪರಿಹಾರವೇ ಉದ್ದೇಶ: ಪರಮೇಶ್ವರ್

● ವಿಕ್ರಮ ವಾಹಿನಿ । ಬೆಂಗಳೂರು

ಬರ ಪರಿಹಾರ ಮಾರ್ಗಸೂಚಿಗಳ ಕುರಿತು ಪ್ರತಿಪಕ್ಷಗಳ ಟೀಕೆಗೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಜಿ. ಪರಮೇಶ್ವರ್, ಅರ್ಹ ರೈತರಿಗೆ ಪಾರದರ್ಶಕವಾಗಿ ಪರಿಹಾರ ತಲುಪಿಸುವುದೇ ಸರ್ಕಾರದ ಉದ್ದೇಶ ಎಂದು ಹೇಳಿದರು. ರೈತರು ಹೊಸದಾಗಿ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ. ಫ್ರೂಟ್ಸ್, ಬೆಳೆ ಸಮೀಕ್ಷೆ ಹಾಗೂ ಕಂದಾಯ ದಾಖಲೆಗಳ ಆಧಾರದಲ್ಲಿ ಫಲಾನುಭವಿಗಳನ್ನು ಗುರುತಿಸಲಾಗುವುದು ಎಂದರು.

ಅರ್ಹ ರೈತರಿಗೆ ತಲಾ 2,500 ಮಧ್ಯಂತರ ಪರಿಹಾರ ನೀಡಲು 1,250 ಕೋಟಿ ಮೀಸಲಿಡಲಾಗಿದೆ. ಸೋಮವಾರದಿಂದ ಪರಿಹಾರ ವಿತರಣೆ ಆರಂಭವಾಗಲಿದ್ದು, ಕೇಂದ್ರದಿಂದ ಎನ್‌ಡಿಆರ್‌ಎಫ್ ಅನುದಾನ ಬಂದ ಬಳಿಕ ಉಳಿದ ಪರಿಹಾರ ನೀಡಲಾಗುವುದು ಎಂದು ತಿಳಿಸಿದರು. ರೈತರು ಕಚೇರಿಗಳಿಗೆ ಅಲೆದಾಡುವ ಅಗತ್ಯವಿಲ್ಲ; ದಾಖಲೆಗಳ ಆಧಾರದಲ್ಲೇ ಅರ್ಹ ಫಲಾನುಭವಿಗಳನ್ನು ಗುರುತಿಸಿ ಪರಿಹಾರ ವಿತರಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಸ್ಟಿಂಗ್ ಪ್ರಕರಣ ಮುಚ್ಚಿಹಾಕಲಾಗಿದೆ: ಆರ್. ಅಶೋಕ್ ಆರೋಪ

ಸ್ಟಿಂಗ್ ಆಪರೇಷನ್ ವಿವಾದದ ಬೆನ್ನಲ್ಲೇ ನ.1ರಂದು ದೆಹಲಿಯಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಲಿರುವ ಸಿದ್ದರಾಮಯ್ಯ: ಪ್ರಕರಣವನ್ನು ಕಾಂಗ್ರೆಸ್ ಹೈಕಮಾಂಡ್ ಮುಚ್ಚಿಹಾಕಿದೆ ಎಂದು ಆರ್. ಅಶೋಕ್ ಆರೋಪ. ಮತ್ತೊಂದೆಡೆ, ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ದೆಹಲಿ ಪ್ರತಿಭಟನೆಯಿಂದ ದೂರ ಉಳಿಯಲು ಡಿ.ಕೆ. ಶಿವಕುಮಾರ್ ನಿರ್ಧಾರ.

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಕಾರ್ಯಕಾರಿ ಸಮಿತಿ (ಅಫಅ) ಸದಸ್ಯ ಸಿದ್ದರಾಮಯ್ಯ ಅವರು ನವೆಂಬರ್ 1ರಂದು ದೆಹಲಿಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಲಿದ್ದಾರೆ. ತಮ್ಮ ವಿರುದ್ಧ ಕೇಳಿಬಂದಿರುವ ಸ್ಟಿಂಗ್ ಆಪರೇಷನ್ ಆರೋಪ ಹಾಗೂ ಅದರ ತನಿಖೆಯ ಬೆಳವಣಿಗೆಗಳ ಕುರಿತು ಪಕ್ಷದ ವರಿಷ್ಠರೊಂದಿಗೆ ಚರ್ಚಿಸುವ ಸಾಧ್ಯತೆಯಿದೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಖIಖ) ವಿರೋಧಿಸಿ ಕಾಂಗ್ರೆಸ್ ನೇತೃತ್ವದ ಖಟಆಖಂ ಮೈತ್ರಿಕೂಟ ನವೆಂಬರ್ 1ರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ಆಯೋಜಿಸಿರುವ ಪ್ರತಿಭಟನೆಯಲ್ಲಿ ಸಿದ್ದರಾಮಯ್ಯ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿಯಾಗಿ ವಿವಾದದ ಕುರಿತು ಮಾಹಿತಿ ನೀಡುವ ನಿರೀಕ್ಷೆಯಿದೆ.

ತಮ್ಮ ವಿರುದ್ಧದ ಲೈಂಗಿಕ ದೌರ್ಜನ್ಯದ ಆರೋಪಗಳನ್ನು ಒಳಗೊಂಡ ವೈರಲ್ ವಿಡಿಯೊ ನಕಲಿಯಾಗಿದ್ದು, ಉದ್ದೇಶಪೂರ್ವಕವಾಗಿ ಸೃಷ್ಟಿಸಲಾಗಿದೆ ಎಂದು ಬೆಂಗಳೂರು ಪೊಲೀಸರು ಪ್ರಾಥಮಿಕ ತನಿಖೆಯಲ್ಲಿ ತಿಳಿಸಿರುವ ಹಿನ್ನೆಲೆಯಲ್ಲಿ ಈ ಭೇಟಿ ಮಹತ್ವ ಪಡೆದಿದೆ. ಆದರೆ, ವಿಡಿಯೊದ ಮೂಲ ಹಾಗೂ ಅದರ ಹಿಂದಿರುವವರ ಪತ್ತೆಗಾಗಿ ತನಿಖೆ ಮುಂದುವರಿದಿದೆ. ಈ ಹಿಂದೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರ ಗಮನಕ್ಕೂ ಸಿದ್ದರಾಮಯ್ಯ ಈ ವಿಚಾರವನ್ನು ತಂದಿದ್ದರು. ಸಚಿವ ಯತೀಂದ್ರ ಸಿದ್ದರಾಮಯ್ಯ ಕೂಡ ತಮ್ಮ ತಂದೆಯ ರಾಜಕೀಯ ವರ್ಚಸ್ಸಿಗೆ ಧಕ್ಕೆ ತರುವ ಉದ್ದೇಶದಿಂದ ಪಿತೂರಿ ನಡೆಸಲಾಗಿದೆ ಎಂದು ಆರೋಪಿಸಿದ್ದರು.

ತನಿಖೆ ಮುಚ್ಚಿಹಾಕಲಾಗಿದೆ: ಅಶೋಕ್ ಆರೋಪ

ಇದೇ ವಿಚಾರವಾಗಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕೆ.ಸಿ. ವೇಣುಗೋಪಾಲ್ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಕರೆಸಿ ತನಿಖೆ ಸ್ಥಗಿತಗೊಳಿಸುವಂತೆ ಸೂಚಿಸಿದ್ದಾರೆ. ಕಾಂಗ್ರೆಸ್ ಹೈಕಮಾಂಡ್ ಒತ್ತಡದಿಂದಲೇ ಪೊಲೀಸರು ಪ್ರಕರಣವನ್ನು ಮುಚ್ಚಿಹಾಕಿದ್ದಾರೆ ಎಂದು ಆರೋಪಿಸಿದ್ದಾರೆ.

ಪ್ರಕರಣವನ್ನು ಪೊಲೀಸರು ಅಚ್ಚುಕಟ್ಟಾಗಿ ಹೂತುಹಾಕಿದ್ದಾರೆ ಎಂದು ಟೀಕಿಸಿರುವ ಅಶೋಕ್, ವಿವಾದವನ್ನು ನಿಭಾಯಿಸಿದ ರೀತಿಯ ಬಗ್ಗೆ ಸಿದ್ದರಾಮಯ್ಯ ಅಸಮಾಧಾನಗೊಂಡಿದ್ದಾರೆ ಎಂದೂ ಪ್ರತಿಪಾದಿಸಿದ್ದಾರೆ. ಆದರೆ, ಈ ಆರೋಪಗಳಿಗೆ ಸಂಬಂಧಿಸಿದಂತೆ ಕಾಂಗ್ರೆಸ್ ನಾಯಕರಿಂದ ಅಧಿಕೃತ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ.

ಇನ್ನೊಂದೆಡೆ, ಸಚಿವ ಸತೀಶ್ ಜಾರಕಿಹೊಳಿ ಅವರು ಪಕ್ಷದೊಳಗಿನ ಪಿತೂರಿಯ ಸಾಧ್ಯತೆಯನ್ನು ತಳ್ಳಿಹಾಕಿದ್ದು, ಈ ವಿಚಾರ ಸೇರಿದಂತೆ ಪಕ್ಷದ ಹಲವು ವಿಷಯಗಳ ಕುರಿತು ರಾಹುಲ್ ಗಾಂಧಿ ಅವರೊಂದಿಗೆ ಚರ್ಚಿಸಲು ಸಿದ್ದರಾಮಯ್ಯ ಸ್ವತಂತ್ರರು ಎಂದಿದ್ದಾರೆ. ಗೃಹ ಸಚಿವ ಪ್ರಿಯಾಂಕ್ ಖರ್ಗೆ ಕೂಡ ತನಿಖೆ ಸರಿಯಾದ ದಿಕ್ಕಿನಲ್ಲಿ ಸಾಗುತ್ತಿದೆ ಎಂದು ತಿಳಿಸಿದ್ದಾರೆ.

ಪ್ರತಿಭಟನೆಯಿಂದ ಡಿಕೆಶಿ ದೂರ: ನವೆಂಬರ್ 1ರಂದು ದೆಹಲಿಯಲ್ಲಿ ನಡೆಯಲಿರುವ ಖIಖ ವಿರೋಧಿ ಪ್ರತಿಭಟನೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗವಹಿಸುವುದಿಲ್ಲ.

ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಿರುವುದರಿಂದ ಈ ನಿರ್ಧಾರ ಕೈಗೊಂಡಿರುವುದಾಗಿ ತಿಳಿಸಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವರು ಆಯಾ ಜಿಲ್ಲೆಗಳಲ್ಲಿ ಧ್ವಜಾರೋಹಣ ನೆರವೇರಿಸಲಿದ್ದು, ಶಾಸಕರು ಮತ್ತು ಕಾರ್ಯಕರ್ತರು ರಾಜ್ಯೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಜಿಲ್ಲಾ ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಮತ್ತು ಪಕ್ಷದ ಕಾರ್ಯಕರ್ತರು ದೆಹಲಿ ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

ಇದೇ ವೇಳೆ, ಸ್ಟಿಂಗ್ ಆಪರೇಷನ್ ವಿವಾದದಲ್ಲಿ ಸಿದ್ದರಾಮಯ್ಯ ಅವರಿಗೆ ಕ್ಲೀನ್ ಚಿಟ್ ನೀಡಲಾಗಿದೆ ಎಂದು ಶಿವಕುಮಾರ್ ತಿಳಿಸಿದ್ದಾರೆ.

ಹಿರಿಯ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಅವರಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಬೇಕೆಂಬುದು ತಮ್ಮ ಇಚ್ಛೆಯಾಗಿತ್ತು. ಆದರೆ, ಅವರು ಈ ಬಾರಿಯೂ ಪ್ರಶಸ್ತಿ ಸ್ವೀಕರಿಸಲು ನಿರಾಕರಿಸಿದ್ದಾರೆ ಎಂದು ಹೇಳಿದರು.

ಮಂಡ್ಯ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಪೂರ್ಣಗೊಂಡ ಕಾಮಗಾರಿಗಳ ಉದ್ಘಾಟನೆ ಹಾಗೂ ಫಲಾನುಭವಿಗಳಿಗೆ ಸರ್ಕಾರಿ ಸವಲತ್ತು ವಿತರಣೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದರು. ಈ ವೇಳೆ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಪ್ರತಿನಿಧಿಸುವ ಐದು ದೀಪಗಳನ್ನು ಬೆಳಗಿಸಿದರು. ಬಳಿಕ ಹೊಂಬಾಳೆ ನೆಟ್ಟು, ಬೆಲ್ಲ ಹಾಗೂ ಕೊಬ್ಬರಿ ಸೇವಿಸುವ ಮೂಲಕ ಸಾಂಪ್ರದಾಯಿಕವಾಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ರಿಮೋಟ್ ಬಟನ್ ಒತ್ತುವ ಮೂಲಕ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ, ಪೂರ್ಣಗೊಂಡ ಕಾಮಗಾರಿಗಳನ್ನು ಉದ್ಘಾಟಿಸಿದರು.

ಕೇಂದ್ರ ಗೃಹ ಸಚಿವರ ದಕ್ಷತಾ ಪದಕ: ರಾಜ್ಯದ ಏಳು ಪೊಲೀಸ್ ಸಿಬ್ಬಂದಿಗೆ ಗೌರವ

● ವಿಕ್ರಮ ವಾಹಿನಿ । ಬೆಂಗಳೂರು

ತನಿಖೆ ಮತ್ತು ವಿಧಿವಿಜ್ಞಾನ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಕರ್ನಾಟಕದ ಏಳು ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ 2026ನೇ ಸಾಲಿನ ಪ್ರತಿಷ್ಠಿತ 'ಕೇಂದ್ರೀಯ ಗೃಹ ಸಚಿವರ ದಕ್ಷತಾ ಪದಕ' ಲಭಿಸಿದೆ.

ತನಿಖಾ ಕ್ಷೇತ್ರದಲ್ಲಿ ಉತ್ತಮ ಕಾರ್ಯನಿರ್ವಹಣೆಗಾಗಿ ಆರು ಮಂದಿಯನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಬೆಂಗಳೂರು ನಗರದ ಹಲಸೂರು ಗೇಟ್ ಸಂಚಾರ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಶೋಭಾ ಎನ್., ಬೆಳಗಾವಿ ನಗರದ ಮಾಳಮಾರುತಿ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಬಾವುದ್ದೀನ್ ರುಕ್ಮುದ್ದೀನ್ ಗಡೇಕರ್, ಬೆಂಗಳೂರಿನ ಪ್ರಧಾನ ಕಚೇರಿಯ ಇನ್‌ಸ್ಪೆಕ್ಟರ್ ಎಂ. ಶ್ರೀನಿವಾಸ್ ರಾವ್, ರಾಯಚೂರಿನ ದೇವದುರ್ಗ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ಮಂಜುನಾಥ್, ಬೆಂಗಳೂರು ನಗರ ಪೂರ್ವ ವಿಭಾಗದ ಮಹಿಳಾ ಪೊಲೀಸ್ ಠಾಣೆಯ ಎಎಸ್‌ಐ ರತ್ನಮ್ಮ ಕೆ. ಹಾಗೂ ಬೆಂಗಳೂರಿನ ಸಿಐಡಿ ಘಟಕದ ಸಿಹೆಚ್‌ಸಿ ಬಾಲಕೃಷ್ಣ ವೈ. ಅವರು ಪದಕಕ್ಕೆ ಭಾಜನರಾಗಿದ್ದಾರೆ.

ವಿಧಿವಿಜ್ಞಾನ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆಗಾಗಿ ಮೈಸೂರಿನ ಪ್ರಾದೇಶಿಕ ವಿಧಿವಿಜ್ಞಾನ ಪ್ರಯೋಗಾಲಯದ ಉಪನಿರ್ದೇಶಕ ಡಾ. ಚಂದ್ರಶೇಖರ್ ಅವರಿಗೆ ದಕ್ಷತಾ ಪದಕ ಘೋಷಿಸಲಾಗಿದೆ.

ಅಧಿಕಾರಿಗಳು ಮತ್ತು ಸಿಬ್ಬಂದಿಯ ಅತ್ಯುತ್ತಮ ಸೇವೆ, ಕಾರ್ಯದಕ್ಷತೆ ಹಾಗೂ ಕರ್ತವ್ಯನಿಷ್ಠೆಯನ್ನು ಗುರುತಿಸಿ ಕೇಂದ್ರ ಗೃಹ ಸಚಿವಾಲಯ ಈ ಪದಕಗಳನ್ನು ಪ್ರಕಟಿಸಿದೆ ಎಂದು ಪೊಲೀಸ್ ಪ್ರಧಾನ ಕಚೇರಿಯ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಸಾರ್ವಜನಿಕ ಸಂಪರ್ಕ ಅಧಿಕಾರಿ ಮೂಲಕ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಾಖಲೆ ಇಲ್ಲದ ಗ್ರಾಮಠಾಣಾ ಆಸ್ತಿಗೂ ಇ-ಸ್ವತ್ತು: 2ರಿಂದ ಅರ್ಜಿ ಸ್ವೀಕಾರ

● ವಿಕ್ರಮ ವಾಹಿನಿ । ಬೆಂಗಳೂರು

ಗ್ರಾಮಠಾಣಾ ವ್ಯಾಪ್ತಿಯಲ್ಲಿರುವ ದಾಖಲೆ ಸಹಿತ ಹಾಗೂ ದಾಖಲೆಗಳಿಲ್ಲದ ಆಸ್ತಿಗಳಿಗೆ ಇ-ಸ್ವತ್ತು ನೀಡಲು ಸರ್ಕಾರ ನಿರ್ಧರಿಸಿದ್ದು, ನವೆಂಬರ್ 2ರಿಂದ ಅರ್ಜಿ ಸ್ವೀಕರಿಸಲಾಗುವುದು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗ್ರಾಮೀಣ ಆಸ್ತಿ ಮಾಲೀಕರ ಬಹುದಿನಗಳ ಸಮಸ್ಯೆ ಪರಿಹರಿಸುವ ಉದ್ದೇಶದಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳಿಗೆ ತಿದ್ದುಪಡಿ ಮಾಡಲಾಗಿದೆ. ಇ-ಸ್ವತ್ತು 2 ತಂತ್ರಾಂಶದಲ್ಲಿಯೂ ಅಗತ್ಯ ಬದಲಾವಣೆಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಈ ಕ್ರಮದಿಂದ ಗ್ರಾಮಠಾಣಾ ವ್ಯಾಪ್ತಿಯಲ್ಲಿ ಹಲವು ತಲೆಮಾರುಗಳಿಂದ ವಾಸಿಸುತ್ತಿರುವ ಅಂದಾಜು 25ರಿಂದ 30 ಲಕ್ಷ ಜನರಿಗೆ ಅನುಕೂಲವಾಗಲಿದೆ. ದಾಖಲೆಗಳಿಲ್ಲದ ಆಸ್ತಿಗಳಿಗೆ ನೋಂದಣಿಯ ದಾಖಲೆ ಸಲ್ಲಿಸುವುದರಿಂದ ವಿನಾಯಿತಿ ನೀಡಲಾಗಿದ್ದು, 2025ರ ಏಪ್ರಿಲ್ 7ಕ್ಕಿಂತ ಹಿಂದಿನ ವಿದ್ಯುತ್ ಬಿಲ್ ಆಧರಿಸಿ ಹಾಗೂ ಸ್ಥಳ ಪರಿಶೀಲನೆ ನಡೆಸಿ ಇ-ಸ್ವತ್ತು ನೀಡಲಾಗುವುದು. ಆದರೆ, ಆಸ್ತಿ ಸಂಬಂಧ ನ್ಯಾಯಾಲಯದಲ್ಲಿ ವ್ಯಾಜ್ಯವಿದ್ದರೆ, ಹಕ್ಕಿನ ವಿಚಾರದಲ್ಲಿ ತಕರಾರಿದ್ದರೆ ಅಥವಾ ಅರ್ಜಿದಾರರು ಮೂಲ ಮಾಲೀಕರಲ್ಲದಿದ್ದರೆ ಕಾನೂನು ತೊಡಕು ಉಂಟಾಗುವ ಸಾಧ್ಯತೆ ಇರುವುದರಿಂದ ಮಾಲೀಕರಿಂದ ಮುಚ್ಚಳಿಕೆ ಪಡೆಯಲಾಗುವುದು. ಸಲ್ಲಿಸಿರುವ ಮಾಹಿತಿ ತಪ್ಪೆಂದು ಸಾಬೀತಾದಲ್ಲಿ ಇ-ಸ್ವತ್ತು ಪ್ರಮಾಣಪತ್ರ ರದ್ದುಪಡಿಸಲು ಅವಕಾಶವಿರಲಿದೆ ಎಂದರು.

ಸರ್ಕಾರದ ವಸತಿ ಯೋಜನೆಯಡಿ ಹಕ್ಕುಪತ್ರ ಪಡೆದಿದ್ದು, ಅದು ಪ್ರಸ್ತುತ ಲಭ್ಯವಿಲ್ಲದಿದ್ದರೂ ಸಂಬಂಧಪಟ್ಟ ಹಕ್ಕುಪತ್ರ ವಿತರಣಾ ಪ್ರಾಧಿಕಾರದ ದೃಢೀಕರಣ ಪತ್ರ ಪಡೆದು ಇ-ಸ್ವತ್ತು ಪಡೆಯಬಹುದು. ಮಲೆನಾಡು ಪ್ರದೇಶಗಳಲ್ಲಿ ಕಣ ಮನೆ ಹಾಗೂ ಮನೆಗಳ ಆಸ್ತಿಗಳಿಗೂ ಇ-ಸ್ವತ್ತು ನೀಡಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ನಮೂನೆ 11ಬಿ ಪಡೆಯುವ ವಿಧಾನ ಸರಳ

ನಮೂನೆ 11ಬಿ ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸಲಾಗಿದ್ದು, ನೋಂದಾಯಿತ ದಾಖಲೆ ಇಲ್ಲದಿದ್ದರೂ ಕೃಷಿ ಜಮೀನಿನಲ್ಲಿ ವಾಸ ಅಥವಾ ಕೃಷಿ ಉದ್ದೇಶಕ್ಕಾಗಿ ನಿರ್ಮಿಸಿರುವ ಕಟ್ಟಡಗಳಿಗೆ ಇ-ಸ್ವತ್ತು ನಮೂನೆ 11ಬಿ ಪಡೆಯಲು ಅವಕಾಶ ನೀಡಲಾಗಿದೆ. ಕೃಷಿ ಭೂಮಿಯಲ್ಲಿ ವಸತಿ ಯೋಜನೆಯಡಿ ನಿರ್ಮಿಸಿರುವ ಕಟ್ಟಡಗಳು ಹಾಗೂ ಅರಣ್ಯ ಹಕ್ಕು ಕಾಯ್ದೆಯಡಿ ಹಕ್ಕುಪತ್ರ ಪಡೆದಿರುವ ಅರಣ್ಯವಾಸಿಗಳ ಆಸ್ತಿಗಳಿಗೂ ಈ ಸೌಲಭ್ಯ ಅನ್ವಯಿಸಲಿದೆ. ಇತ್ತಲು ಮತ್ತು ಮನೆಯಂಗಳ ಸೇರಿದಂತೆ ಒಟ್ಟು 4,000 ಚದರ ಅಡಿಯೊಳಗಿನ ನಿವೇಶನ ಹಾಗೂ ಆಸ್ತಿಗಳಿಗೆ ಈ ನಿಯಮ ಅನ್ವಯವಾಗಲಿದ್ದು, ಗ್ರಾಮೀಣ ಭಾಗದ ಶೇ.90ಕ್ಕೂ ಹೆಚ್ಚು ಆಸ್ತಿಗಳಿಗೆ ನಮೂನೆ 11ಎ ಮತ್ತು 11ಬಿ ನೀಡಲು ಸಾಧ್ಯವಾಗಲಿದೆ ಎಂದರು.

ನೀತಿ ಸಂಹಿತೆಯಿಂದ ಅಭಿಯಾನ ವಿಳಂಬ

ಗ್ರಾಮಠಾಣಾ ವ್ಯಾಪ್ತಿಯ ಎಲ್ಲ ಆಸ್ತಿಗಳಿಗೆ ಇ-ಸ್ವತ್ತು ನೀಡುವ ಅಭಿಯಾನವನ್ನು ಗಾಂಧಿ ಜಯಂತಿಯಾದ ಅಕ್ಟೋಬರ್ 2ರಿಂದ ಆರಂಭಿಸಿ, ನವೆಂಬರ್ 1ರಿಂದ ಪ್ರಮಾಣಪತ್ರ ವಿತರಿಸಲು ಉದ್ದೇಶಿಸಲಾಗಿತ್ತು. ಆದರೆ ವಿಧಾನಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದ ಕಾರಣ ಅಭಿಯಾನ ಆರಂಭಿಸಲು ಸಾಧ್ಯವಾಗಲಿಲ್ಲ. ಇದೀಗ ನವೆಂಬರ್ 2ರಿಂದ ಅರ್ಜಿ ಸ್ವೀಕರಿಸಿ ಪರಿಶೀಲನೆ ನಡೆಸಲಾಗುವುದು. ಡಿಸೆಂಬರ್ ಮೊದಲ ವಾರದಿಂದ ಇ-ಸ್ವತ್ತು ಪ್ರಮಾಣಪತ್ರ ವಿತರಣೆ ಆರಂಭಿಸಲಾಗುವುದು ಎಂದು ಹೇಳಿದರು.

ಬಿ-ಖರಾಬು ಸಮಸ್ಯೆಗೆ ಪರಿಹಾರ: ಬೆಂಗಳೂರು ಸೇರಿದಂತೆ ನಗರ ಮತ್ತು ಪಟ್ಟಣಗಳ ಸುತ್ತಮುತ್ತಲಿನ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕಂದಾಯ ಭೂಮಿಯಲ್ಲಿ ನಿರ್ಮಿಸಿರುವ ಬಡಾವಣೆಗಳಲ್ಲಿ ಬಿ-ಖರಾಬು ಜಮೀನನ್ನು ನಿವೇಶನಗಳಾಗಿ ವಿಂಗಡಿಸಿರುವುದು ಇ-ಸ್ವತ್ತು ವಿತರಣೆಗೆ ಅಡ್ಡಿಯಾಗಿದೆ. ಅರ್ಜಿದಾರರು ಕೈಬರಹದ ಖಾತೆ ಸಲ್ಲಿಸುತ್ತಿದ್ದು, ಪಹಣಿ ಇಲ್ಲದ ಕಾರಣ ಬಡಾವಣೆಗಳಲ್ಲಿ ಬಿ-ಖರಾಬು ಜಮೀನು ಇರುವುದನ್ನು ಪತ್ತೆಹಚ್ಚಲು ಸಮಸ್ಯೆಯಾಗುತ್ತಿದೆ. ಬಿ-ಖರಾಬು ಭೂಮಿಗೆ ಖಾತೆ ನೀಡಲು ಸಾಧ್ಯವಿಲ್ಲ ಎಂದು ನ್ಯಾಯಾಲಯವೂ ತೀರ್ಪು ನೀಡಿದೆ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಲು ಕಂದಾಯ ಸಚಿವರೊಂದಿಗೆ ಶೀಘ್ರ ಸಭೆ ನಡೆಸಿ, ಜನರಿಗೆ ಅನುಕೂಲವಾಗುವ ಕ್ರಮ ಕೈಗೊಳ್ಳಲಾಗುವುದು ಎಂದು ಈಶ್ವರ ಖಂಡ್ರೆ ತಿಳಿಸಿದರು.

ಹಿರಿಯೂರು ಉಪ ಚುನಾವಣೆಗೆ ಕಾಂಗ್ರೆಸ್ ಸಜ್ಜು

● ವಿಕ್ರಮ ವಾಹಿನಿ । ಬೆಂಗಳೂರು

ಸುಧಾಕರ್ ಅವರ ನಿಧನದಿಂದ ತೆರವಾಗಿರುವ ಹಿರಿಯೂರು ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಎದುರಿಸಲು ಕಾಂಗ್ರೆಸ್ ಪಕ್ಷ ಸಂಪೂರ್ಣ ಸಜ್ಜಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು, ಕೇಂದ್ರ ಚುನಾವಣಾ ಆಯೋಗ ಇನ್ನೂ ವೇಳಾಪಟ್ಟಿ, ಚುನಾವಣೆ ದಿನಾಂಕ ಪ್ರಕಟಿಸಿಲ್ಲ. ಯಾರನ್ನು ಕಣಕ್ಕಿಳಿಸಬೇಕು ಎಂಬ ಬಗ್ಗೆ ಪಕ್ಷದ ವರಿಷ್ಠರು ತೀರ್ಮಾನಿಸಲಿದ್ದಾರೆ. ಯಾವಾಗ ಚುನಾವಣೆ ನಡೆಸಿದರೂ ಎದುರಿಸಲು ನಾವು ಸಿದ್ಧ. ಈ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆದ್ದೇ ಗೆಲ್ಲುತ್ತದೆ ಎಂದರು.

ಕಬ್ಬು ಬೆಳೆಗಾರರ ಹೋರಾಟಕ್ಕೆ ರಾಜ್ಯದ ಬೆಂಬಲ: ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ನ್ಯಾಯಸಮ್ಮತ ಮತ್ತು ಲಾಭದಾಯಕ ಬೆಲೆ (ಎಫ್‌ಆರ್‌ಪಿ) ಹೆಚ್ಚಳಕ್ಕೆ ಒತ್ತಾಯಿಸಿ ಕೇಂದ್ರ ಸರ್ಕಾರದ ವಿರುದ್ಧ ಕಬ್ಬು ಬೆಳೆಗಾರರು ನಡೆಸುತ್ತಿರುವ ಹೋರಾಟಕ್ಕೆ ರಾಜ್ಯ ಸರ್ಕಾರದ ಬೆಂಬಲವಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಕ್ಕರೆ ಕಾರ್ಖಾನೆಗಳು ಉಳಿಯುವುದರ ಜೊತೆಗೆ ರೈತರಿಗೂ ಕಬ್ಬಿಗೆ ಲಾಭದಾಯಕ ಬೆಲೆ ದೊರೆಯಬೇಕು. ಆದರೆ, ಕೇಂದ್ರ ಸರ್ಕಾರ ಈ ನಿಟ್ಟಿನಲ್ಲಿ ಅಗತ್ಯ ಗಮನ ಹರಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಬ್ಬಿನ ಬೆಲೆ ಹೆಚ್ಚಳವಾದರೆ ಸಕ್ಕರೆಯ ದರವೂ ಏರಿಕೆಯಾಗಬಹುದು. ಈಗಾಗಲೇ ಡೀಸೆಲ್, ಪೆಟ್ರೋಲ್, ಅಕ್ಕಿ, ಗೋಧಿ, ಬೇಳೆ ಹಾಗೂ ರಸಗೊಬ್ಬರ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಕಬ್ಬಿನ ಎಫ್‌ಆರ್‌ಪಿ ದರ ಹೆಚ್ಚಿಸುವುದರ ಜೊತೆಗೆ ಬಡವರಿಗೆ ರಿಯಾಯಿತಿ ದರದಲ್ಲಿ ಪಡಿತರ ಸಕ್ಕರೆ ವಿತರಿಸಲು ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಎಥನಾಲ್ ಬಳಕೆಯಿಂದ ತೈಲ ಕಂಪನಿಗಳಿಗೆ ಲಾಭವಾಗುತ್ತಿದೆಯೇ ಹೊರತು ರೈತರಿಗೆ ನಿರೀಕ್ಷಿತ ಪ್ರಯೋಜನ ದೊರೆಯುತ್ತಿಲ್ಲ. ರೈತರ ಹಿತ ಕಾಪಾಡುವುದು ಹಾಗೂ ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದು ಕೇಂದ್ರ ಸರ್ಕಾರದ ಕರ್ತವ್ಯ. ರಾಜ್ಯ ಸರ್ಕಾರ ರೈತರಿಗೆ ಅಗತ್ಯ ಬೆಂಬಲ ಮತ್ತು ಸಹಕಾರ ನೀಡುತ್ತಿದೆ ಎಂದು ಈಶ್ವರ ಖಂಡ್ರೆ ಹೇಳಿದರು.

ಇತಿಹಾಸದ ವೈಭವಕ್ಕೆ ನೃತ್ಯದ ಮೆರುಗು; ಯಶಸ್ವಿಯಾಗಿ ಮೂಡಿಬಂದ 'ಪುನರ್ನವ'

● ವಿಕ್ರಮ ವಾಹಿನಿ । ಬೆಂಗಳೂರು

ಭಾರತದ ಐತಿಹಾಸಿಕ ಚಕ್ರವರ್ತಿಗಳಾದ ರಾಜಾ ರಾಣಾ ಕುಂಭ ಮತ್ತು ರಾಜರಾಜ ಚೋಳರ ಜೀವನಗಾಥೆಯನ್ನು ನೃತ್ಯ ಮತ್ತು ಸಂಗೀತದ ಮೂಲಕ ಪರಿಚಯಿಸುವ 'ಪುನರ್ನವ' ವಿಶೇಷ ಕಲಾ ಪ್ರದರ್ಶನವು ಅಕ್ಟೋಬರ್ 31ರಂದು ನಗರದ ಕಲಾ ಸಂಭ್ರಮದಲ್ಲಿ ಯಶಸ್ವಿಯಾಗಿ ನಡೆಯಿತು.

ನವೀನ್ ಆರ್. ಹೆಗಡೆ ಅವರು ಕಥಕ್ ಮತ್ತು ರಂಗಭೂಮಿಯ ಮೂಲಕ ರಾಜಾ ರಾಣಾ ಕುಂಭ ಅವರ ಜೀವನಗಾಥೆಯನ್ನು ಪ್ರಸ್ತುತಪಡಿಸಿದರೆ, ಸಮುದ್ಯತಾ ಭಟ್ ಅವರು ಭರತನಾಟ್ಯದ ಮೂಲಕ ರಾಜರಾಜ ಚೋಳರ ಆಡಳಿತ ಮತ್ತು ಸಾಧನೆಗಳನ್ನು ವೇದಿಕೆಯಲ್ಲಿ

ಅನಾವರಣಗೊಳಿಸಿದರು. ಪಂಡಿತ್ ಸಮೀರ್ ರಾವ್ ಅವರ ಮೂಲ ಸಂಗೀತ ಸಂಯೋಜನೆ ಪ್ರದರ್ಶನಕ್ಕೆ ಕಳೆ ನೀಡಿತು. ಇತಿಹಾಸಕಾರರಾದ ಡಾ. ಅನುರಾಧಾ ವಿ. ಅವರು ಸಂವಾದ ನಿರ್ವಹಿಸಿದರು. ಪರಮ್ ಫೌಂಡೇಶನ್‌ನ ಪರಮ್ ಕಲ್ಚರ್ ವತಿಯಿಂದ ಆಯೋಜಿಸಲಾದ ಈ ಉಪಕ್ರಮದಡಿ ಆಯ್ಕೆಯಾದ ಕಲಾವಿದರಿಗೆ 2 ಲಕ್ಷ ಪ್ರೋತ್ಸಾಹಧನದ ಜೊತೆಗೆ ವೇದಿಕೆ, ತಾಲೀಮು ಸ್ಥಳ, ಬೆಳಕು ಮತ್ತು ಧ್ವನಿ ಸೇರಿದಂತೆ ಅಗತ್ಯ ತಾಂತ್ರಿಕ ಸೌಲಭ್ಯಗಳನ್ನು ಒದಗಿಸಲಾಗಿತ್ತು. ಇತಿಹಾಸ, ನೃತ್ಯ ಮತ್ತು ಸಂಗೀತದ ಸಮ್ಮಿಲನದೊಂದಿಗೆ ಮೂಡಿಬಂದ 'ಪುನರ್ನವ' ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು.

ಭಾರತೀಯ ಸಾಂಸ್ಕೃತಿಕ ಪರಂಪರೆಯನ್ನು ಜನರಿಗೆ ತಲುಪಿಸುವ ಹಾಗೂ ಕಲಾವಿದರನ್ನು ಪ್ರೋತ್ಸಾಹಿಸುವ ಪರಮ್ ಕಲ್ಚರ್‌ನ ಪ್ರಯತ್ನಕ್ಕೆ ಈ ಕಾರ್ಯಕ್ರಮ ಮತ್ತಷ್ಟು ಬಲ ತುಂಬಿತು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

ಡಾ.ಚಂದ್ರಶೇಖರ್ ಹೆಸರು ಕೈಬಿಟ್ಟಿದ್ದಕ್ಕೆ ಖಂಡನೆ

● ವಿಕ್ರಮ ವಾಹಿನಿ । ಕಾರ್ಕಳ

ಈ ಬಾರಿಯ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಘೋಷಣೆಯ ಸಂದರ್ಭದಲ್ಲಿ ಉಡುಪಿಯ ಆದರ್ಶ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಚಂದ್ರಶೇಖರ್ ಅವರ ಹೆಸರನ್ನು ಮೊದಲ ಪಟ್ಟಿಯಲ್ಲಿ ಘೋಷಿಸಿ, ಬಳಿಕ ಕೈಬಿಟ್ಟು ಮತ್ತೊಬ್ಬರನ್ನು ಆಯ್ಕೆ ಮಾಡಿರುವುದು ತೀವ್ರ ಖಂಡನೀಯವಾಗಿದೆ ಎಂದು ಕರ್ನಾಟಕ ಸರ್ಕಾರದ ಮಾಜಿ ಸಚಿವರು ಮತ್ತು ಕಾರ್ಕಳ ಶಾಸಕರಾದ ವಿ.ಸುನೀಲ್ ಕುಮಾರ್ ಅವರು ಹೇಳಿದ್ದಾರೆ.

ವೈದ್ಯಕೀಯ ಕ್ಷೇತ್ರದ ಜೊತೆಗೆ ಹಲವು ಸಾಮಾಜಿಕ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡು, ಸದಾ ಜನರ ಧ್ವನಿಯಾಗಿ, ಸಮಾಜದ ಹಿತಕ್ಕಾಗಿ ಶ್ರಮಿಸುತ್ತಿರುವ ಡಾ. ಚಂದ್ರಶೇಖರ್ ಅವರ ಸೇವೆಯನ್ನು ಕಡೆಗಣಿಸಿರುವುದು ಅತ್ಯಂತ ನೋವಿನ ಸಂಗತಿ. ಇಂತಹ ಗೌರವಾನ್ವಿತ ವ್ಯಕ್ತಿತ್ವಕ್ಕೆ ರಾಜ್ಯ ಸರ್ಕಾರ ಅಪಮಾನ ಮಾಡಿದಂತಾಗಿದೆ.

ಸರ್ಕಾರದ ಈ ನಡೆಗೆ ತೀವ್ರ ಆಕ್ರೋಶ ಮತ್ತು ಉಗ್ರ ಖಂಡನೆಯನ್ನು ವ್ಯಕ್ತಪಡಿಸುವುದಾಗಿ ಅವರು ಹೇಳಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸರ್ಕಾರದ ಕಾರ್ಯದರ್ಶಿ ಮಂಜುಶ್ರೀ ಎನ್., ಇವರು ತಿದ್ದುಪಡಿ ಆದೇಶದ ಅಧಿಸೂಚನೆ ಹೊರಡಿಸಿದ್ದು, ಉತ್ತರ ಕನ್ನಡ ಜಿಲ್ಲೆಯ ಜೀಯು ಎಂದೇ ಖ್ಯಾತರಾದ ಜಿ.ಯು.ಭಟ್ ಅವರಿಗೆ ಸಂಕೀರ್ಣ ವಿಭಾಗದಲ್ಲಿ ಡಾ.ಚಂದ್ರಶೇಖರ್ ಅವರ ಬದಲಾಗಿ ಈ ರಾಜ್ಯೋತ್ಸವ ಪ್ರಶಸ್ತಿ ಘೋಷಿಸಿದ್ದರು. ಈ ಹಿನ್ನೆಲೆಯಲ್ಲಿ ವಿ.ಸುನೀಲ್ ಕುಮಾರ್ ಅವರು ಕಿಡಿ ಕಾರಿದ್ದಾರೆ.

ಪಟೇಲ್ ಸ್ವಾರ್ಥವಿಲ್ಲದ ಸಂತ, ನಿಸ್ವಾರ್ಥಿ ರಾಷ್ಟ್ರಪುರುಷ: ಸಿ.ಟಿ. ರವಿ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು 500ಕ್ಕೂ ಹೆಚ್ಚು ಸಂಸ್ಥಾನಗಳನ್ನು ಒಗ್ಗೂಡಿಸಿ ಅಖಂಡ ಭಾರತದ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ ನಿಸ್ವಾರ್ಥಿ ರಾಷ್ಟ್ರಪುರುಷ ಎಂದು ವಿಧಾನಪರಿಷತ್ ಸದಸ್ಯ ಹಾಗೂ ಮಾಜಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ಬಣ್ಣಿಸಿದ್ದಾರೆ.

ನಗರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಆಯೋಜಿಸಿದ್ದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜಯಂತಿ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದ ಅವರು, ಸ್ವತಂತ್ರ ಭಾರತದ ಇತಿಹಾಸದಲ್ಲಿ ಪಟೇಲರ ಹೆಸರು ಎಂದೆಂದಿಗೂ ಸ್ಮರಣೀಯ. ಬ್ರಿಟಿಷರು ಭಾರತಕ್ಕೆ ಸ್ವಾತಂತ್ರ್ಯ ನೀಡುವ ಸಂದರ್ಭದಲ್ಲಿ 500ಕ್ಕೂ ಹೆಚ್ಚು ಸಂಸ್ಥಾನಗಳಿಗೆ ಭಾರತ ಅಥವಾ ಪಾಕಿಸ್ತಾನಕ್ಕೆ ಸೇರುವ ಇಲ್ಲವೇ ಸ್ವತಂತ್ರವಾಗಿರುವ ಆಯ್ಕೆಯನ್ನು ನೀಡಿದ್ದರು. ಇಂತಹ ಸಂದರ್ಭದಲ್ಲಿ ಪಟೇಲರು ತಮ್ಮ ದೂರದೃಷ್ಟಿ ಮತ್ತು ರಾಜತಾಂತ್ರಿಕ ಚತುರತೆಯಿಂದ ಸಂಸ್ಥಾನಗಳನ್ನು ಭಾರತದೊಂದಿಗೆ ವಿಲೀನಗೊಳಿಸುವಲ್ಲಿ ಯಶಸ್ವಿಯಾದರು ಎಂದರು.

ಸಾಮ, ದಾನ, ಭೇದ ಮತ್ತು ದಂಡ ಎಂಬ ನಾಲ್ಕು ತಂತ್ರಗಳನ್ನು ಬಳಸಿಕೊಂಡು ದೇಶದ ಏಕತೆಗೆ ಶ್ರಮಿಸಿದರು. ಜುನಾಗಢ್ ಮತ್ತು ಹೈದರಾಬಾದ್ ಸಂಸ್ಥಾನಗಳು ಭಾರತಕ್ಕೆ ಸೇರಲು ನಿರಾಕರಿಸಿದಾಗ ಅಗತ್ಯವಿದ್ದಲ್ಲಿ ಸೇನಾ ಶಕ್ತಿಯನ್ನೂ ಬಳಸಿಕೊಂಡು ಅವುಗಳನ್ನು ಒಕ್ಕೂಟಕ್ಕೆ ಸೇರಿಸಿದರು. ಬಲಿಷ್ಠ ರಾಷ್ಟ್ರ ನಿರ್ಮಾಣವಾಗದಿದ್ದರೆ ಗಳಿಸಿದ ಸ್ವಾತಂತ್ರ್ಯ ಉಳಿಸಿಕೊಳ್ಳುವುದು ಕಷ್ಟ ಎಂಬುದನ್ನು ಪಟೇಲರು ಅರಿತಿದ್ದರು ಎಂದು ಹೇಳಿದರು.

ದೇಶದ ಇಂದಿನ ಭೌಗೋಳಿಕ ಸ್ವರೂಪ ರೂಪುಗೊಳ್ಳುವಲ್ಲಿ ಪಟೇಲರ ಕೊಡುಗೆ ಅಪಾರ. ಹೀಗಾಗಿಯೇ ಅವರನ್ನು ಉಕ್ಕಿನ ಮನುಷ್ಯ ಎಂದು ಕರೆಯಲಾಗುತ್ತದೆ. ಪ್ರಧಾನಿಯಾಗುವ ಅವಕಾಶವಿದ್ದರೂ ಮಹಾತ್ಮ ಗಾಂಧೀಜಿ ಅವರ ಮೇಲಿನ ಗೌರವ ಹಾಗೂ ರಾಷ್ಟ್ರಹಿತದ ದೃಷ್ಟಿಯಿಂದ ಆ ಸ್ಥಾನವನ್ನು ತ್ಯಾಗ ಮಾಡಿದರು. ಪಟೇಲರು ಪ್ರಧಾನಿಯಾಗಿದ್ದರೆ ರಾಜಕಾರಣದಲ್ಲಿ ವಂಶಪಾರಂಪರ್ಯ ಮತ್ತು ಸ್ವಜನಪಕ್ಷಪಾತಕ್ಕೆ ಅವಕಾಶವಿರುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟರು.

ಪಟೇಲರ ಆದರ್ಶ ಮತ್ತು ದೇಶದ ಏಕತೆಗೆ ಅವರು ನೀಡಿದ ಕೊಡುಗೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿ ಅವರು ಗುಜರಾತ್‌ನಲ್ಲಿ ಏಕತಾ ಪ್ರತಿಮೆ ನಿರ್ಮಿಸಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯ ಖಜಾಂಚಿ ಸುಬ್ಬನರಸಿಂಹ, ರಾಜ್ಯ ಕಾರ್ಯಾಲಯ ಸಹಕಾರ್ಯದರ್ಶಿ ವಿಶ್ವನಾಥ್ ಅಣಜಿ, ರಾಜ್ಯ ಮಾಧ್ಯಮ ಸಹಸಂಚಾಲಕ ಪ್ರಶಾಂತ್ ಕೆಡೆಂಜಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಾಲಯದ ಸಿಬ್ಬಂದಿ ಉಪಸ್ಥಿತರಿದ್ದರು.

ARAIಗೆ ಭೂಮಿ ನೀಡಿಲ್ಲ; ಸಚಿವರ ಹೇಳಿಕೆ ಸುಳ್ಳು: ಕುಮಾರಸ್ವಾಮಿ ಕಚೇರಿ

● ವಿಕ್ರಮ ವಾಹಿನಿ । ಬೆಂಗಳೂರು

ಮಂಡ್ಯದಲ್ಲಿ ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ (ARAI) ಸಂಸ್ಥೆಯ ಪರೀಕ್ಷಾ ಕೇಂದ್ರಗಳ ಸ್ಥಾಪನೆಗೆ 100 ಎಕರೆ ಭೂಮಿ ಮಂಜೂರು ಮಾಡಲಾಗಿದೆ ಎಂಬ ಸಚಿವ ಚೆಲುವರಾಯಸ್ವಾಮಿ ಅವರ ಹೇಳಿಕೆ ಸುಳ್ಳು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಕಚೇರಿ ಸ್ಪಷ್ಟಪಡಿಸಿದೆ.

ಈ ಸಂಬಂಧ ಕೇಂದ್ರ ಸಚಿವರ ಆಪ್ತ ಕಾರ್ಯದರ್ಶಿ ಕೆ.ಆರ್. ರಘುಕುಮಾರ್ ಅವರು ರಾಜ್ಯದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿದ್ದು, ಭೂಮಿ ಮಂಜೂರಾತಿ ಆದೇಶದ ಪ್ರತಿ ಹಾಗೂ ಈ ಬಗ್ಗೆ ಸ್ಪಷ್ಟೀಕರಣ ನೀಡುವಂತೆ ಕೋರಿದ್ದಾರೆ.

ಮಂಡ್ಯದಲ್ಲಿ ಶನಿವಾರ ನಡೆದ ಅಭಿವೃದ್ಧಿ ಕಾಮಗಾರಿಗಳ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಮ್ಮುಖದಲ್ಲೇ ಜಲಸಂಪನ್ಮೂಲ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಅವರು ಎಆರ್‌ಎಐಗೆ ಈಗಾಗಲೇ 100 ಎಕರೆ ಭೂಮಿ ನೀಡಲಾಗಿದೆ. ಅಗತ್ಯವಿದ್ದರೆ ಇನ್ನೂ 500 ಎಕರೆ ನೀಡಲು ಸಿದ್ಧವಿರುವುದಾಗಿ ಹೇಳಿಕೆ ನೀಡಿದ್ದರು.

ಕೇಂದ್ರ ಸರ್ಕಾರದ ಬೃಹತ್ ಕೈಗಾರಿಕೆ ಸಚಿವಾಲಯದ ಅಧೀನದಲ್ಲಿರುವ ಎಆರ್‌ಎಐ ಸಂಸ್ಥೆಯು ಮಂಡ್ಯದಲ್ಲಿ ನಿರ್ಮಾಣ ಮತ್ತು ಮೂಲಸೌಕರ್ಯ ಉಪಕರಣಗಳ ಪರೀಕ್ಷಾ ಕೇಂದ್ರ ಹಾಗೂ ವಿದ್ಯುತ್ ವಾಹನಗಳ ಪರೀಕ್ಷಾ ಕೇಂದ್ರ ಸ್ಥಾಪಿಸಲು ಉದ್ದೇಶಿಸಿದೆ. ಆದರೆ, 100 ಎಕರೆ ಭೂಮಿ ಮಂಜೂರು ಮಾಡಿರುವ ಕುರಿತು ರಾಜ್ಯ ಸರ್ಕಾರ, ಜಿಲ್ಲಾಡಳಿತ ಅಥವಾ ಎಆರ್‌ಎಐ ಸಂಸ್ಥೆಗೆ ಯಾವುದೇ ಅಧಿಕೃತ ಮಾಹಿತಿ ತಲುಪಿಲ್ಲ ಎಂದು ಪತ್ರದಲ್ಲಿ ತಿಳಿಸಲಾಗಿದೆ.

ಭೂಮಿ ಮಂಜೂರು ಮಾಡಿದ್ದರೆ ಅದರ ಆದೇಶದ ಪ್ರತಿಯನ್ನು ಒದಗಿಸಬೇಕು. ಜಿಲ್ಲಾಡಳಿತದಿಂದ ARAI ಸಂಸ್ಥೆ, ಕೇಂದ್ರ ಸಚಿವರು ಹಾಗೂ ಅವರ ಕಚೇರಿಗೆ ಈ ಬಗ್ಗೆ ಮಾಹಿತಿ ನೀಡದಿರಲು ಕಾರಣವೇನು ಎಂಬುದನ್ನೂ ಸ್ಪಷ್ಟಪಡಿಸಬೇಕು ಎಂದು ಪತ್ರದಲ್ಲಿ ಒತ್ತಾಯಿಸಲಾಗಿದೆ. ಈ ಪತ್ರವನ್ನು ಮುಖ್ಯ ಕಾರ್ಯದರ್ಶಿಗೆ ಇ-ಮೇಲ್ ಮೂಲಕವೂ ಕಳುಹಿಸಲಾಗಿದೆ.

ಸ್ಟಿಂಗ್ ಪ್ರಕರಣ: ಕೃಪಾ ಆಳ್ವಾ ಕಾಂಗ್ರೆಸ್‌ನಿಂದ 6 ವರ್ಷ ಉಚ್ಚಾಟನೆ

● ವಿಕ್ರಮ ವಾಹಿನಿ । ಬೆಂಗಳೂರು

ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಕಾಂಗ್ರೆಸ್ ಹಿರಿಯ ನಾಯಕಿ ಕೃಪಾ ಆಳ್ವಾ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಲಾಗಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಸ್ಟಿಂಗ್ ಕಾರ್ಯಾಚರಣೆಯಲ್ಲಿ ಅವರ ಹೆಸರು ಕೇಳಿಬಂದ ಹಿನ್ನೆಲೆಯಲ್ಲಿ ಕೆಪಿಸಿಸಿ ಈ ಕ್ರಮ ಕೈಗೊಂಡಿದೆ. ಈ ಬೆಳವಣಿಗೆ ರಾಜ್ಯ ಕಾಂಗ್ರೆಸ್‌ನಲ್ಲಿ ರಾಜಕೀಯ ಸಂಚಲನ ಮೂಡಿಸಿದೆ. ಇದೇ ಪ್ರಕರಣದಲ್ಲಿ ಸಿದ್ದರಾಮಯ್ಯ ಅವರಿಗೆ ಸಿಸಿಬಿ ಕ್ಲೀನ್ ಚಿಟ್ ನೀಡಿದ್ದು, ಪ್ರಕರಣದ ಸುತ್ತಲಿನ ರಾಜಕೀಯ ಆರೋಪ-ಪ್ರತ್ಯಾರೋಪಗಳು ಮುಂದುವರಿದಿವೆ.

ರಾಜ್ಯ ರಾಜಕಾರಣದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿರುವ ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಹಿರಿಯ ನಾಯಕಿ ಕೃಪಾ ಆಳ್ವಾ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಲಾಗಿದೆ. ಪಕ್ಷದ ನಾಯಕರ ವಿರುದ್ಧ ನಡೆದಿರುವ ಸ್ಟಿಂಗ್ ಕಾರ್ಯಾಚರಣೆಯಲ್ಲಿ ಅವರ ಹೆಸರು ಕೇಳಿಬಂದ ಹಿನ್ನೆಲೆಯಲ್ಲಿ ಕೆಪಿಸಿಸಿ ಈ ಕ್ರಮ ಕೈಗೊಂಡಿದೆ ಎಂದು ತಿಳಿದುಬಂದಿದೆ.

ಸ್ಟಿಂಗ್ ಆಪರೇಷನ್ ಹಿಂದೆ ಸ್ವಪಕ್ಷದವರ ಕೈವಾಡವಿದೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ಈ ಹಿಂದೆ ಆರೋಪಿಸಿದ್ದರು. ಅಲ್ಲದೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕೂಡ ಈ ಪ್ರಕರಣದ ವಿಚಾರವಾಗಿ ಕೃಪಾ ಆಳ್ವಾ ಅವರ ಹೆಸರನ್ನು ಪ್ರಸ್ತಾಪಿಸಿದ್ದರು. ಇದರ ಬೆನ್ನಲ್ಲೇ ಪ್ರಕರಣ ರಾಜಕೀಯ ವಲಯದಲ್ಲಿ ಮತ್ತಷ್ಟು ಚರ್ಚೆಗೆ ಕಾರಣವಾಗಿತ್ತು.

ಉಚ್ಚಾಟನೆ ಆದೇಶದ ಪ್ರಕಾರ, ಸ್ಟಿಂಗ್ ಪ್ರಕರಣದಲ್ಲಿ ಕೃಪಾ ಆಳ್ವಾ ಅವರ ಹೆಸರು ಕೇಳಿಬಂದಿರುವುದು ಪಕ್ಷಕ್ಕೆ ಮುಜುಗರ ಉಂಟುಮಾಡಿದೆ. ಈ ಕುರಿತು ಕಾರಣ ಕೇಳಿ ಕೆಪಿಸಿಸಿ ನೋಟಿಸ್ ನೀಡಿದ್ದರೂ ಅವರು ಉತ್ತರಿಸಿರಲಿಲ್ಲ. ಹೀಗಾಗಿ ಪಕ್ಷ ವಿರೋಧಿ ಚಟುವಟಿಕೆ ಆರೋಪದ ಹಿನ್ನೆಲೆಯಲ್ಲಿ ಆರು ವರ್ಷಗಳ ಕಾಲ ಉಚ್ಚಾಟನೆ ಮಾಡಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಸಿದ್ದರಾಮಯ್ಯಗೆ ಕ್ಲೀನ್ ಚಿಟ್: ಇದೇ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಿಸಿಬಿ ಕ್ಲೀನ್ ಚಿಟ್ ನೀಡಿದೆ. ಅವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದ ವೈರಲ್ ವಿಡಿಯೊ ನಕಲಿಯಾಗಿದ್ದು, ಉದ್ದೇಶಪೂರ್ವಕವಾಗಿ ಸೃಷ್ಟಿಸಲಾಗಿದೆ ಎಂದು ಸಿಸಿಬಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದೆ. ಸ್ಟಿಂಗ್ ತಂಡದಿಂದ ಬ್ಲ್ಯಾಕ್‌ಮೇಲ್ ನಡೆದಿದೆಯೇ ಎಂಬ ಬಗ್ಗೆಯೂ ಚರ್ಚೆ ನಡೆಯುತ್ತಿದ್ದು, ಈ ಕುರಿತು ಸಿದ್ದರಾಮಯ್ಯ ಅವರ ಹೇಳಿಕೆ ಪಡೆಯುವ ಸಾಧ್ಯತೆಯಿದೆ ಎನ್ನಲಾಗಿದೆ.

ವಿದೇಶಕ್ಕೆ ತೆರಳಿದರೇ ಕೃಪಾ ಆಳ್ವಾ?: ಸಿದ್ದರಾಮಯ್ಯ ಅವರು ಕೃಪಾ ಆಳ್ವಾ ಹೆಸರನ್ನು ಪ್ರಸ್ತಾಪಿಸಿದ ಬೆನ್ನಲ್ಲೇ, ಅಕ್ಟೋಬರ್ 24ರಂದು ಅವರು ಬೆಂಗಳೂರಿನ ಕೇಂದ್ರ ಸೈಬರ್ ಅಪರಾಧ ವಿಭಾಗದ ಪೊಲೀಸರ ಮುಂದೆ ವಿಚಾರಣೆಗೆ ಹಾಜರಾಗಿದ್ದರು. ಇದೀಗ ಅವರು ವಿದೇಶಕ್ಕೆ ತೆರಳಿದ್ದಾರೆ ಎಂಬ ವರದಿಗಳು ಹರಿದಾಡುತ್ತಿದ್ದು, ಈ ಬಗ್ಗೆ ಅಧಿಕೃತ ಮಾಹಿತಿ ಲಭ್ಯವಾಗಿಲ್ಲ.

ಯಾರಿದು ಕೃಪಾ ಆಳ್ವಾ?; ಕೃಪಾ ಆಳ್ವಾ ಅವರು ಕರ್ನಾಟಕ ಕಾಂಗ್ರೆಸ್‌ನ ಹಿರಿಯ ಮಹಿಳಾ ನಾಯಕರಲ್ಲಿ ಒಬ್ಬರು. 1992ರಲ್ಲಿ ಹತ್ಯೆಗೀಡಾದ ಮಂಗಳೂರಿನ ಸಮಾಜ ಸೇವಕ ಅಮರ್ ಆಳ್ವಾ ಅವರ ಪತ್ನಿ. ಪತಿಯ ನಿಧನದ ಬಳಿಕ ಕಾಂಗ್ರೆಸ್ ಸೇರುವ ಮೂಲಕ ರಾಜಕೀಯ ಪ್ರವೇಶಿಸಿದ ಅವರು, ದಕ್ಷಿಣ ಕನ್ನಡ ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿಯಾಗಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯಾಗಿ, ವಕ್ತಾರೆಯಾಗಿ ಹಾಗೂ ರಾಜ್ಯ ಪ್ರಚಾರ ಸಮಿತಿಯ ಸಂಯೋಜಕರಾಗಿ ಕಾರ್ಯನಿರ್ವಹಿಸಿದ್ದರು. 2015ರಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಅವಧಿಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷೆಯಾಗಿಯೂ ಸೇವೆ ಸಲ್ಲಿಸಿದ್ದರು.

ಎಂಇಐ ಅಧಿಕಾರಿ ಜಿ.ಎಸ್.ಶ್ರೀನಿಧಿ ಹೃದಯಾಘಾತದಿಂದ ನಿಧನ

● ವಿಕ್ರಮ ವಾಹಿನಿ । ಬೆಂಗಳೂರು

ನಗರದ ಲಗ್ಗೆರೆಯ ಎಂಇಐ ಬಡಾವಣೆಯ ನಿವಾಸಿ ಹಾಗೂ ಎಂಇಐ ಸಂಸ್ಥೆಯ ಅಧಿಕಾರಿಯಾಗಿದ್ದ ಜಿ.ಎಸ್. ಶ್ರೀನಿಧಿ (53) ಅವರು ಹೃದಯಾಘಾತದಿಂದ ನಿಧನರಾಗಿದ್ದಾರೆ.

ನೇರ ನುಡಿ ಹಾಗೂ ಸರಳ ವ್ಯಕ್ತಿತ್ವದ ಶ್ರೀನಿಧಿ ಅವರು ತಮ್ಮ ವೃತ್ತಿಜೀವನದ ಜೊತೆಗೆ ಧಾರ್ಮಿಕ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು. ಅವರ ನಿಧನದ ಸುದ್ದಿ ತಿಳಿದು ಅಪಾರ ಸಂಖ್ಯೆಯ ನೌಕರರು, ಎಂಇಐ ಅಧ್ಯಕ್ಷ ಮನೋಹರ್ ಹಾಗೂ ಸಂಸ್ಥೆಯ ಹಿರಿಯ ಅಧಿಕಾರಿಗಳು ಅಂತಿಮ ದರ್ಶನ ಪಡೆದು ಕುಟುಂಬದವರಿಗೆ ಸಾಂತ್ವನ ಹೇಳಿದರು.

ಮೃತರು ಪತ್ನಿ ಬಿ.ಎನ್. ಸ್ವರ್ಣಲತಾ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅವರ ನಿಧನಕ್ಕೆ ಕುಟುಂಬದವರು, ಸ್ನೇಹಿತರು ಹಾಗೂ ಸಹೋದ್ಯೋಗಿಗಳು ಸಂತಾಪ ಸೂಚಿಸಿದ್ದಾರೆ.

ಹಾಲು, ಮೊಸರು ದರ ಏರಿಕೆ ಖಂಡಿಸಿ ಬಿಜೆಪಿ ಹೋರಾಟ

● ವಿಕ್ರಮ ವಾಹಿನಿ । ದಾವಣಗೆರೆ

ಹಾಲು ಮತ್ತು ಮೊಸರಿನ ಬೆಲೆ ಏರಿಕೆ ಮೂಲಕ ಕಾಂಗ್ರೆಸ್ ಸರ್ಕಾರ ಜನಸಾಮಾನ್ಯರ ಮೇಲೆ ಬೆಲೆ ಏರಿಕೆಯ ಹೊರೆ ಹೊರಿಸಿದೆ. ದರ ಏರಿಕೆ ಹಿಂಪಡೆಯದಿದ್ದರೆ ರಾಜ್ಯಾದ್ಯಂತ ಪ್ರತಿಭಟನೆ ನಡೆಸಲಾಗುವುದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಎಚ್ಚರಿಸಿದರು.

ನಗರದಲ್ಲಿ ಮಾತನಾಡಿದ ಅವರು, ಹಾಲಿನ ದರವನ್ನು ಲೀಟರ್‌ಗೆ 8 ರೂ. ಹೆಚ್ಚಿಸಿರುವುದರಿಂದ ಗ್ರಾಹಕರಿಗೆ ಹೆಚ್ಚಿನ ಹೊರೆ ಬೀಳಲಿದೆ. ರೈತರಿಗೆ ಅನುಕೂಲ ಕಲ್ಪಿಸುವುದು ಸ್ವಾಗತಾರ್ಹವಾದರೂ ಅದರ ಹೊರೆ ಗ್ರಾಹಕರ ಮೇಲೆ ಹಾಕಬಾರದು. ಸರ್ಕಾರವೇ ಸಹಾಯಧನ ಹೆಚ್ಚಿಸಿ ಹೆಚ್ಚುವರಿ ವೆಚ್ಚ ಭರಿಸಬೇಕು ಎಂದು ಒತ್ತಾಯಿಸಿದರು.

ವಾಲ್ಮೀಕಿ ಮೀಸಲಾತಿ ವಿಚಾರದಲ್ಲಿ ಕಾಂಗ್ರೆಸ್ ತನ್ನ ವೈಫಲ್ಯ ಮುಚ್ಚಿಕೊಳ್ಳಲು ಪ್ರಧಾನಿ ಮೋದಿ ಅವರ ಮೇಲೆ ಜವಾಬ್ದಾರಿ ಹೊರಿಸುತ್ತಿದೆ. ನ್ಯಾಯಾಲಯದಲ್ಲಿ ಸಮರ್ಥವಾಗಿ ವಾದ ಮಂಡಿಸದೆ ಈಗ ಕಪಟ ನಾಟಕವಾಡುತ್ತಿದೆ ಎಂದು ಆರೋಪಿಸಿದರು. ಕಬ್ಬು ಬೆಳೆಗಾರರ ಸಮಸ್ಯೆ ಪರಿಹರಿಸುವಲ್ಲಿಯೂ ಸರ್ಕಾರ ವಿಫಲವಾಗಿದೆ. ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ರೈತರಿಗೆ ಪರಿಹಾರ ನೀಡುವ ಬದಲು ಕೇಂದ್ರಕ್ಕೆ ಪತ್ರ ಬರೆಯುವ ಭರವಸೆ ನೀಡಿ ಬಂದಿದ್ದಾರೆ. ರಾಜ್ಯ ಸರ್ಕಾರವೇ ಸಮಸ್ಯೆಗೆ ಪ್ರಾಮಾಣಿಕ ಪರಿಹಾರ ಕಂಡುಕೊಳ್ಳಬೇಕು ಎಂದರು.

ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದ್ದು, ಬಸ್‌ಗಳಿಗೆ ಡೀಸೆಲ್ ಖರೀದಿಸಲು ಹಣವಿಲ್ಲ ಎಂಬ ಮುಖ್ಯಮಂತ್ರಿಯ ಹೇಳಿಕೆ ಇದಕ್ಕೆ ಸಾಕ್ಷಿ. ಹಾಲು ಉತ್ಪಾದಕರಿಗೆ ನೀಡಬೇಕಾದ ಸುಮಾರು 1,700 ಕೋಟಿ ರೂ. ಸಹಾಯಧನವೂ ಬಾಕಿಯಿದೆ ಎಂದು ದೂರಿದರು.

ನಾಲ್ಕು ವಿಧಾನ ಪರಿಷತ್ ಕ್ಷೇತ್ರಗಳಲ್ಲಿ ಎನ್‌ಡಿಎ ಗೆಲುವು ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯಕ್ಕೆ ಜನರು ನೀಡಿದ ಉತ್ತರವಾಗಿದೆ. ಬಿಜೆಪಿಯ ಆಂತರಿಕ ಭಿನ್ನಾಭಿಪ್ರಾಯಗಳು ಶೀಘ್ರ ಬಗೆಹರಿಯಲಿವೆ. ಹಿರಿಯೂರು ಉಪಚುನಾವಣೆಯಲ್ಲಿ ಜೆಡಿಎಸ್ ಸಹಕಾರದ ಸಾಧ್ಯತೆ ಕುರಿತು ಕಾದು ನೋಡಬೇಕಿದೆ ಎಂದು ತಿಳಿಸಿದರು. ಬಿಜೆಪಿಯಿಂದ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ರಾಜ್ಯಾದ್ಯಂತ ಪಾದಯಾತ್ರೆ, ಸಾರ್ವಜನಿಕ ಸಂವಾದ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ನಡೆಸಲಾಗುವುದು. ಚಿತ್ರದುರ್ಗ ವಿಭಾಗದ ಪಾದಯಾತ್ರೆಯಲ್ಲಿ ಸುಮಾರು 10 ಸಾವಿರ ಜನರು ಭಾಗವಹಿಸುವ ನಿರೀಕ್ಷೆಯಿದೆ ಎಂದು ವಿಜಯೇಂದ್ರ ಹೇಳಿದರು.

ಸುಳ್ಳು ಒತ್ತುವರಿ ಆರೋಪ: ಆರ್ಯ ಹಂಸ ಅಪಾರ್ಟ್‌ಮೆಂಟ್ ನಿವಾಸಿಗಳಿಗೆ ರೂ 1 ಲಕ್ಷ ದಂಡ

● ವಿಕ್ರಮ ವಾಹಿನಿ । ಬೆಂಗಳೂರು

ಉದ್ಯಾನಕ್ಕೆ ಮೀಸಲಿಟ್ಟ ಜಾಗ ಒತ್ತುವರಿಯಾಗಿದೆ ಎಂದು ಯಾವುದೇ ದಾಖಲೆ ಪರಿಶೀಲಿಸದೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದ ಜೆ.ಪಿ. ನಗರದ ಆರ್ಯ ಹಂಸ ಅಪಾರ್ಟ್‌ಮೆಂಟ್ ನಿವಾಸಿಗಳಿಗೆ ಹೈಕೋರ್ಟ್ ರೂ 1 ಲಕ್ಷ ದಂಡ ವಿಧಿಸಿದೆ. ದಂಡದ ಮೊತ್ತವನ್ನು ವಾಯುಪಡೆಯ ಕಮಾಂಡ್ ಆಸ್ಪತ್ರೆಗೆ ಪಾವತಿಸುವಂತೆ ನ್ಯಾಯಾಲಯ ಆದೇಶಿಸಿದೆ.

ಏಕಸದಸ್ಯ ಪೀಠದ ಆದೇಶ ಪ್ರಶ್ನಿಸಿ ನಿವಾಸಿಗಳು ಸಲ್ಲಿಸಿದ್ದ ಮೇಲ್ಮನವಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಡಿ.ಕೆ. ಸಿಂಗ್ ಮತ್ತು ನ್ಯಾಯಮೂರ್ತಿ ಎಚ್. ಶಾಂತಿ ಭೂಷಣ್ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದೆ.

ಮೂಲ ದಾಖಲೆಗಳನ್ನು ಪರಿಶೀಲಿಸದೆ, ಊಹಾಪೋಹಗಳ ಆಧಾರದಲ್ಲಿ ಬಿಬಿಎಂಪಿ ಮತ್ತು ಬಿಡಿಎ ಅಧಿಕಾರಿಗಳ ವಿರುದ್ಧ ಗಂಭೀರ ಆರೋಪ ಮಾಡಲಾಗಿದೆ. ಇದರಿಂದ ನ್ಯಾಯಾಲಯದ ಅಮೂಲ್ಯ ಸಮಯ ವ್ಯರ್ಥವಾಗಿದೆ ಎಂದು ಪೀಠ ಅಸಮಾಧಾನ ವ್ಯಕ್ತಪಡಿಸಿದೆ. ಅರ್ಜಿದಾರರಿಗೆ ರೂ 5 ಲಕ್ಷ ದಂಡ ವಿಧಿಸಲು ನಿರ್ಧರಿಸಿದ್ದರೂ, ಅಂತಿಮವಾಗಿ ಅದನ್ನು ರೂ 1 ಲಕ್ಷಕ್ಕೆ ಸೀಮಿತಗೊಳಿಸಿದೆ. ಒಂದು ತಿಂಗಳೊಳಗೆ ದಂಡ ಪಾವತಿಸಿ ರಸೀದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸುವಂತೆ ಸೂಚಿಸಿದೆ.

ಪ್ರಕರಣದ ಹಿನ್ನೆಲೆ: ಬೆಂಗಳೂರು ದಕ್ಷಿಣ ತಾಲೂಕಿನ ಉತ್ತರಹಳ್ಳಿ ಹೋಬಳಿಯ ಕೊತ್ತನೂರು ಗ್ರಾಮದ ಸರ್ವೆ ನಂ. 28/3ರ ಜಾಗವನ್ನು ಉದ್ಯಾನಕ್ಕೆ ಮೀಸಲಿಡಲಾಗಿದೆ. ಆದರೆ, ಅಲ್ಲಿ ನಿಯಮಬಾಹಿರವಾಗಿ ಶಾಲಾ ಕಟ್ಟಡ ನಿರ್ಮಿಸಲಾಗಿದೆ ಎಂದು ಆರೋಪಿಸಿ, ಕಟ್ಟಡ ತೆರವುಗೊಳಿಸುವಂತೆ ಅಪಾರ್ಟ್‌ಮೆಂಟ್ ನಿವಾಸಿಗಳು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ವಿಚಾರಣೆ ವೇಳೆ ಬಿಡಿಎ ಆಯುಕ್ತರು ಸಲ್ಲಿಸಿದ ಪ್ರಮಾಣಪತ್ರದಿಂದ ಆರೋಪಕ್ಕೆ ಆಧಾರವಿಲ್ಲ ಎಂಬುದು ಸ್ಪಷ್ಟವಾಯಿತು. ಬಿಡಿಎ ದಾಖಲೆಗಳ ಪ್ರಕಾರ, 2000ರಲ್ಲಿ 70:30 ಯೋಜನೆಯಡಿ ಲೇಔಟ್‌ಗೆ ಅನುಮೋದನೆ ನೀಡಲಾಗಿತ್ತು.

ಭೂಮಿಯ ಭೌಗೋಳಿಕ ಲಕ್ಷಣಗಳ ಹಿನ್ನೆಲೆಯಲ್ಲಿ ಉದ್ಯಾನಕ್ಕೆ ಮೀಸಲಿದ್ದ ಜಾಗವನ್ನು ಸರ್ವೆ ನಂ. 30(ಪಿ)ಗೆ ಬದಲಾಯಿಸಲಾಗಿದ್ದು, 2002ರಲ್ಲೇ ಬಿಡಿಎ ಅಧಿಕೃತ ಒಪ್ಪಿಗೆ ನೀಡಿತ್ತು. ಹೀಗಾಗಿ ಕಟ್ಟಡ ನಿರ್ಮಾಣವಾಗಿರುವ ಜಾಗವು ಉದ್ಯಾನಕ್ಕೆ ಮೀಸಲಾದ ಪ್ರದೇಶವಲ್ಲ ಎಂದು ವಿಭಾಗೀಯ ಪೀಠ ಸ್ಪಷ್ಟಪಡಿಸಿದೆ.

ದಾಖಲೆಗಳ ಸತ್ಯಾಸತ್ಯತೆ ಪರಿಶೀಲಿಸದೆ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಸಲ್ಲಿಸುವುದು ನ್ಯಾಯಾಂಗ ಪ್ರಕ್ರಿಯೆಯ ದುರುಪಯೋಗಕ್ಕೆ ಕಾರಣವಾಗುತ್ತದೆ ಎಂದು ಪೀಠ ಎಚ್ಚರಿಕೆ ನೀಡಿದೆ.

ಮಗಳ ಮದುವೆಗೆ ಯಲಹಂಕ ಪ್ಯಾಲೇಸ್ ನಿರಾಕರಿಸಿದ ಜಗನ್

● ವಿಕ್ರಮ ವಾಹಿನಿ । ಬೆಂಗಳೂರು

ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ದಿವಂಗತ ವೈ.ಎಸ್. ರಾಜಶೇಖರ ರೆಡ್ಡಿ ಅವರ ಕುಟುಂಬದಲ್ಲಿನ ಆಸ್ತಿ ಮತ್ತು ಕೌಟುಂಬಿಕ ಕಲಹ ಇದೀಗ ಬೆಂಗಳೂರಿಗೂ ವಿಸ್ತರಿಸಿದೆ. ತಮ್ಮ ಪುತ್ರಿ ಅಂಜಲಿ ರೆಡ್ಡಿ ಅವರ ಮದುವೆಯನ್ನು ಬೆಂಗಳೂರಿನ ಯಲಹಂಕ ಪ್ಯಾಲೇಸ್‌ನಲ್ಲಿ ನಡೆಸಲು ಉದ್ದೇಶಿಸಿದ್ದ ಆಂಧ್ರಪ್ರದೇಶ ಕಾಂಗ್ರೆಸ್ ಅಧ್ಯಕ್ಷೆ ವೈ.ಎಸ್. ಶರ್ಮಿಳಾ ಅವರಿಗೆ ಸಹೋದರ ವೈ.ಎಸ್. ಜಗನ್ ಮೋಹನ್ ರೆಡ್ಡಿ ಅನುಮತಿ ನಿರಾಕರಿಸಿದ್ದಾರೆ. ಹೀಗಾಗಿ ಮದುವೆ ಸಮಾರಂಭವನ್ನು ಬೇರೆ ಸ್ಥಳದಲ್ಲಿ ಆಯೋಜಿಸಲು ಶರ್ಮಿಳಾ ನಿರ್ಧರಿಸಿದ್ದಾರೆ.

ನವೆಂಬರ್ 25ರಂದು ಅಂಜಲಿ ರೆಡ್ಡಿ ಮತ್ತು ಸೋಮಲ ರಘುರಾಮ್ ರೆಡ್ಡಿ ಅವರ ವಿವಾಹ ನಿಗದಿಯಾಗಿದೆ. ಈ ಸಮಾರಂಭವನ್ನು ಜಗನ್ ಮತ್ತು ಶರ್ಮಿಳಾ ಅವರ ಜಂಟಿ ಒಡೆತನದಲ್ಲಿರುವ ಯಲಹಂಕ ಪ್ಯಾಲೇಸ್‌ನಲ್ಲಿ ನಡೆಸಲು ಶರ್ಮಿಳಾ ಯೋಜಿಸಿದ್ದರು. ಆದರೆ ಭದ್ರತಾ ಕಾರಣಗಳನ್ನು ಮುಂದಿಟ್ಟುಕೊಂಡು ಜಗನ್ ಅನುಮತಿ ನೀಡಲು ನಿರಾಕರಿಸಿದ್ದರು.

ಈ ಕುರಿತು ಶನಿವಾರ 'ಎಕ್ಸ್'ನಲ್ಲಿ ಪ್ರತಿಕ್ರಿಯಿಸಿರುವ ಶರ್ಮಿಳಾ, ಮದುವೆ ನಡೆಯುವ ಸ್ಥಳದ ವಿಚಾರವಾಗಿ ಉಂಟಾಗಿರುವ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಯಾವುದೇ ಜಗಳ ಅಥವಾ ವಿವಾದಕ್ಕೆ ಅವಕಾಶ ನೀಡದೆ ವಿವಾಹ ಸಮಾರಂಭವನ್ನು ನೆರವೇರಿಸುವುದು ತಮ್ಮ ಜವಾಬ್ದಾರಿಯಾಗಿದೆ. ಹೀಗಾಗಿ ಯಲಹಂಕದಲ್ಲಿರುವ ಮನೆಯಿಂದ ಬೇರೆ ಸ್ಥಳದಲ್ಲಿ ಮದುವೆ ಆಯೋಜಿಸಲು ನಿರ್ಧರಿಸಿರುವುದಾಗಿ ತಿಳಿಸಿದ್ದಾರೆ.

20 ಎಕರೆ ಆಸ್ತಿ: ವೈ.ಎಸ್. ರಾಜಶೇಖರ ರೆಡ್ಡಿ ಅವರು ಬೆಂಗಳೂರಿನ ಯಲಹಂಕದಲ್ಲಿ ಸುಮಾರು 20 ಎಕರೆ ಜಾಗದಲ್ಲಿ ಯಲಹಂಕ ಪ್ಯಾಲೇಸ್ ನಿರ್ಮಿಸಿದ್ದರು. ಕುಟುಂಬದ ಹಲವು ಸಮಾರಂಭಗಳು ಇಲ್ಲಿಯೇ ನಡೆದಿದ್ದವು. ತಮ್ಮ ನಿಧನಕ್ಕೂ ಮುನ್ನ ಈ ಆಸ್ತಿಯನ್ನು ಪುತ್ರ ಜಗನ್ ಮತ್ತು ಪುತ್ರಿ ಶರ್ಮಿಳಾ ಅವರಿಗೆ ಸಮಾನವಾಗಿ ಹಂಚಿಕೆ ಮಾಡಿದ್ದರು ಎನ್ನಲಾಗಿದೆ. ಇಬ್ಬರ ಮನೆಗಳೂ ಒಂದೇ ಆವರಣದಲ್ಲಿದ್ದು, ಆಸ್ತಿಯಲ್ಲಿ ಯಾವುದೇ ಕಾರ್ಯಕ್ರಮ ಆಯೋಜಿಸಲು ಇಬ್ಬರ ಒಪ್ಪಿಗೆ ಅಗತ್ಯವಾಗಿದೆ. ಇದೀಗ ಮಗಳ ಮದುವೆಯ ಸ್ಥಳದ ವಿಚಾರದಲ್ಲೂ ಸಹೋದರ-ಸಹೋದರಿಯರ ನಡುವಿನ ಭಿನ್ನಾಭಿಪ್ರಾಯ ಬಹಿರಂಗವಾಗಿದೆ.

ಖರ್ಗೆ ನಿವಾಸದಲ್ಲಿ ಅಣಕು ಸಂಸತ್: ಸಿಇಸಿ ವಿರುದ್ಧ ಜನತಾ ಮಹಾಭಿಯೋಗ ನಿರ್ಣಯ

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿಯಿಂದ ಹೆಸರುಗಳ ಅಕ್ರಮ ತೆರವು ಹಾಗೂ ಚುನಾವಣಾ ಅಕ್ರಮಗಳ ಆರೋಪ ಮುಂದಿಟ್ಟು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ 'ಇಂಡಿಯಾ' ಒಕ್ಕೂಟ ಸಾಂಕೇತಿಕ ಜನತಾ ಮಹಾಭಿಯೋಗ ನಿರ್ಣಯ ಮಂಡಿಸಿದೆ. ನವೆಂಬರ್ 1ರಂದು ದೆಹಲಿಯಲ್ಲಿ ಬೃಹತ್ ಪ್ರತಿಭಟನಾ ರ್‍ಯಾಲಿಗೂ ಸಿದ್ಧತೆ ನಡೆಸಿದೆ.

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಕಾಂಗ್ರೆಸ್ ನೇತೃತ್ವದ 'ಇಂಡಿಯಾ' ಒಕ್ಕೂಟವು ಜನತಾ ಮಹಾಭಿಯೋಗದ ಹೆಸರಿನಲ್ಲಿ ಸಾಂಕೇತಿಕ ದೋಷಾರೋಪಣಾ ನಿರ್ಣಯ ಮಂಡಿಸಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಲ್ಲಿ ನಡೆದ ಅಣಕು ಸಂಸತ್ ಅಧಿವೇಶನಕ್ಕೆ ಲೋಕಸಭೆಯ ಮಾಜಿ ಸ್ಪೀಕರ್ ಮೀರಾ ಕುಮಾರ್ ಅಧ್ಯಕ್ಷತೆ ವಹಿಸಿದ್ದರು.

ಸಂಸತ್ತಿನ ಕಲಾಪದ ಮಾದರಿಯಲ್ಲೇ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಹುಲ್ಲುಹಾಸಿನ ಮೇಲೆ ಆಸನಗಳನ್ನು ವ್ಯವಸ್ಥೆ ಮಾಡಲಾಗಿತ್ತು.

ಹಳೆಯ ಸಂಸತ್ ಭವನದ ಕೇಂದ್ರ ಸಭಾಂಗಣದ ಮಾದರಿಯಲ್ಲಿ ವೇದಿಕೆ ಸಿದ್ಧಪಡಿಸಲಾಗಿತ್ತು. ಸ್ಪೀಕರ್ ಪೀಠದ ಮಾದರಿಯಲ್ಲಿ ಮೀರಾ ಕುಮಾರ್ ಅವರಿಗೆ ಆಸನ ಕಲ್ಪಿಸಲಾಗಿತ್ತು. ಮುಖ್ಯಮಂತ್ರಿಗಳು, ಸಂಸದರು, ವಿರೋಧ ಪಕ್ಷಗಳ ಮುಖಂಡರು ಹಾಗೂ ನಾಗರಿಕ ಸಮಾಜದ ಪ್ರತಿನಿಧಿಗಳು ಭಾಗವಹಿಸಿದ್ದರು.

ಇತ್ತೀಚಿನ ಚುನಾವಣೆಗಳಲ್ಲಿ ಮತಗಳ್ಳತನ ನಡೆದಿದ್ದು, ಮತದಾರರ ಪಟ್ಟಿಯಿಂದ ಅನೇಕ ಅರ್ಹ ಮತದಾರರ ಹೆಸರುಗಳನ್ನು ಅಕ್ರಮವಾಗಿ ತೆಗೆದುಹಾಕಲಾಗಿದೆ ಎಂಬುದು ವಿರೋಧ ಪಕ್ಷಗಳ ಪ್ರಮುಖ ಆರೋಪವಾಗಿದೆ. ಈ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾ ಆಯುಕ್ತರನ್ನು ಹುದ್ದೆಯಿಂದ ಕೆಳಗಿಳಿಸುವಂತೆ ಒತ್ತಾಯಿಸಿ ಸಾಂಕೇತಿಕ ನಿರ್ಣಯ ಮಂಡಿಸಲಾಯಿತು.

ಅಧಿವೇಶನ ಉದ್ದೇಶಿಸಿ ಮಾತನಾಡಿದ ಮೀರಾ ಕುಮಾರ್, ಮತದಾರರ ಪಟ್ಟಿಯಿಂದ ಜನರ ಹೆಸರುಗಳನ್ನು ತೆಗೆದುಹಾಕುತ್ತಿರುವ ಕುರಿತು ಪ್ರಶ್ನಿಸಿದಾಗ ಪಾರದರ್ಶಕ ಉತ್ತರಗಳು ದೊರೆಯುತ್ತಿಲ್ಲ. ಈ ಹಿನ್ನೆಲೆಯಲ್ಲಿ ಜ್ಞಾನೇಶ್ ಕುಮಾರ್ ವಿರುದ್ಧ ನಿರ್ಣಯ ಮಂಡಿಸಲಾಗಿದೆ.

ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾದ ಭಾರತದ ಚುನಾವಣಾ ವ್ಯವಸ್ಥೆಯಲ್ಲಿನ ಬೆಳವಣಿಗೆಗಳು ಕಳವಳಕಾರಿ ಎಂದು ಹೇಳಿದರು. ಮತದಾರರ ಪಟ್ಟಿಯಿಂದ ಹೆಸರು ಕೈಬಿಡಲಾದ ನಾಗರಿಕರಿಗೂ ತಮ್ಮ ಅಹವಾಲು ಹೇಳಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು ಎಂದರು.

ನಂತರ ನಿರ್ಣಯ ಮಂಡಿಸಿದ ಮಲ್ಲಿಕಾರ್ಜುನ ಖರ್ಗೆ, ಪ್ರಜಾಪ್ರಭುತ್ವದಲ್ಲಿ ಮತದಾನದ ಹಕ್ಕು ಅತ್ಯಂತ ಮೂಲಭೂತವಾದದ್ದು. ಆದರೆ ಇಂದು ಆ ಹಕ್ಕು ಗಂಭೀರ ಅಪಾಯದಲ್ಲಿದೆ. ಇದು ಪ್ರಜಾಪ್ರಭುತ್ವವನ್ನು ಉಳಿಸಿಕೊಳ್ಳುವ ಹೋರಾಟವಾಗಿದೆ ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಸೂಚನೆಯಂತೆ ಮುಖ್ಯ ಚುನಾವಣಾ ಆಯುಕ್ತರು ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಆರೋಪಿಸಿದರು.

ಅಧಿಕಾರ ಉಳಿಸಿಕೊಳ್ಳಲು ರಾಜಕೀಯ ಪಕ್ಷಗಳನ್ನು ಒಡೆಯುವುದು, ಸರ್ಕಾರಗಳನ್ನು ಉರುಳಿಸುವುದು, ಚುನಾವಣಾ ಬಾಂಡ್‌ಗಳ ಬಳಕೆ ಹಾಗೂ ಇ.ಡಿ., ಸಿಬಿಐನಂತಹ ತನಿಖಾ ಸಂಸ್ಥೆಗಳ ದುರ್ಬಳಕೆ ಸೇರಿದಂತೆ ಹಲವು ಕ್ರಮಗಳನ್ನು ಆಡಳಿತಾರೂಢ ವ್ಯವಸ್ಥೆ ಕೈಗೊಂಡಿದೆ. ಇದೀಗ ಮತಗಳನ್ನೇ ಕದಿಯುವ ಪ್ರಯತ್ನ ನಡೆಯುತ್ತಿದೆ ಎಂದು ಖರ್ಗೆ ದೂರಿದರು. ಮುಖ್ಯ ಚುನಾವಣಾ ಆಯುಕ್ತರನ್ನು ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳನ್ನು ವಜಾಗೊಳಿಸುವ ಮಾದರಿಯಲ್ಲಿ ಪದಚ್ಯುತಗೊಳಿಸುವ ಪ್ರಕ್ರಿಯೆ ಜಾರಿಯಾಗಬೇಕು ಎಂದು ಖರ್ಗೆ ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿರುವ ಬಿಜೆಪಿ, ಚುನಾವಣೆಯಲ್ಲಿ ಗೆಲ್ಲಲು ಸಾಧ್ಯವಾಗದ ರಾಹುಲ್ ಗಾಂಧಿ ಈಗ ತಮಗೆ ಇಷ್ಟವಾದ ಸಂಸತ್ತಿನಲ್ಲಿ ಕುಳಿತಿದ್ದಾರೆ ಎಂದು ವ್ಯಂಗ್ಯವಾಡಿದೆ.

ಇದೇ ವೇಳೆ, ನವೆಂಬರ್ 1ರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ 'ಇಂಡಿಯಾ' ಒಕ್ಕೂಟದ ವತಿಯಿಂದ ಬೃಹತ್ ಪ್ರತಿಭಟನಾ ರ್‍ಯಾಲಿ ಆಯೋಜಿಸಲಾಗಿದೆ. ಆದರೆ, ಆಮ್ ಆದ್ಮಿ ಪಕ್ಷವು ತಾನು ಈ ಒಕ್ಕೂಟದ ಭಾಗವಲ್ಲ ಎಂದು ಸ್ಪಷ್ಟಪಡಿಸಿದೆ.

ಅರ್ಹ ಎಲ್ಲರಿಗೂ ಇ-ಖಾತಾ ವಿತರಿಸಿ: ಯತೀಂದ್ರ

● ವಿಕ್ರಮ ವಾಹಿನಿ । ಮೈಸೂರು

ಅರ್ಹ ಎಲ್ಲ ಆಸ್ತಿ ಮಾಲೀಕರಿಗೂ ಇ-ಖಾತಾ ಸೌಲಭ್ಯ ತಲುಪಿಸುವಂತೆ ನಗರಾಭಿವೃದ್ಧಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದರು.

ಮೈಸೂರು ಮಹಾನಗರ ಪಾಲಿಕೆ ಆವರಣದಲ್ಲಿ ಶನಿವಾರ ಪ್ರಜಾಸೇವಾ ವಿಶೇಷ ಇ-ಖಾತಾ ಆಂದೋಲನ ಉದ್ಘಾಟಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯ 2.10 ಲಕ್ಷಕ್ಕೂ ಅಧಿಕ ಆಸ್ತಿಗಳ ಪೈಕಿ ಈವರೆಗೆ 78,700ಕ್ಕೂ ಹೆಚ್ಚು ಆಸ್ತಿಗಳಿಗೆ ಇ-ಖಾತಾ ವಿತರಿಸಲಾಗಿದೆ ಎಂದರು. ಅಕ್ಟೋಬರ್ 28ರ ಆಂದೋಲನದಲ್ಲಿ ಸಲ್ಲಿಕೆಯಾದ 730 ಅರ್ಜಿಗಳಲ್ಲಿ 590 ಅರ್ಹರಿಗೆ ಇ-ಖಾತಾ ನೀಡಲಾಗಿದೆ. ಉಳಿದ ಅರ್ಹರಿಗೂ ಸೌಲಭ್ಯ ಕಲ್ಪಿಸಲು ನವೆಂಬರ್ 5, 6 ಮತ್ತು 7ರಂದು ಮತ್ತೊಮ್ಮೆ ವಿಶೇಷ ಆಂದೋಲನ ನಡೆಸಲಾಗುವುದು ಎಂದು ತಿಳಿಸಿದರು.

ದಾಖಲೆಗಳ ಕೊರತೆಯಿಂದ ಯಾರೂ ಸೌಲಭ್ಯದಿಂದ ವಂಚಿತರಾಗಬಾರದು. ಅರ್ಜಿಗಳ ವಿಲೇವಾರಿಯಲ್ಲಿ ವಿಳಂಬ ಮಾಡದೆ ಪಾರದರ್ಶಕವಾಗಿ ಇ-ಖಾತಾ ವಿತರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 203,